ಸಂಪುಟ : 9 ಸಂಚಿಕೆ 129 ಪುಟ : 4 ಬೆಲೆ: 3.00 ಮಂಗಳವಾರ ಜೂನ್ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 129 Pages : 4 Price : 3.00 Tuesday June 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ


ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 25ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 28ರಲ್ಲಿ ದೇವಗಿರಿಯವರ ಲೈನ್, ಸಂಕಟಿಯವರ ಲೈನ್, ಎಸ್.ಎಸ್. ಪಾಟೀಲ್ ಲೈನ್, ಅಪಾರ್ಟ್ಮೆಂಟ್, ಅಬ್ಬಿಗೇರಿ, ಕೊರ್ಲಹಳ್ಳಿಯವರ ಲೈನ್, ಕಟ್ಟಿಯವರ ಲೈನ್, ಗವಾಯಿಗಳ ಆಶ್ರಮದ ಮುಂದಿನ ಭಾಗ, ಕಾಗದಗಾರ ಲೈನ್, ಕೃಷ್ಣಾ ಟ್ಯೂಷನ್ ಲೈನ್, ಸೂಲಾಪಟ್ಟಿ ಲೈನ್, ವಾರ್ಡ್ ನಂ. 21, 22, 23ರಲ್ಲಿ ಚನ್ನಪ್ಪ ಹೊಸ ಲೈನ್, ಹಳೇ ಲೈನ್, ರಾಮದಾಸ, ಗುಳಗುಂದಿ, ಭೂಮಾ ಅವರ ಲೈನ್, 8ನಂ. ಶಾಲೆ, ಶಿವಪ್ಪಯ್ಯನಮಠ ಅವರ ಲೈನ್, ಸ್ಮಶಾನಗಟ್ಟಿ ಭಾಗ-1, 2, 3, 4 ಕಮತರ ಪ್ಲಾಟ್, ಅಕ್ಕಿಯವರ ಪ್ಲಾಟ್, ಮುನವಳ್ಳಿ ಪ್ಲಾಟ್, ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 17, 18, 19 ನವಾಜಿ ಮೇಂಬರ್ ಲೈನ್, ಬಾವಿಯವರ ಲೈನ್, ಹಾವನೂರ ಅವರ ಲೈನ್, ದುರಗಮ್ಮನಗುಡಿ ಭಾಗ-1,2, ಕಾಗದಗಾರ ಹಳೇ ಲೈನ್, ಹೊಸ ಲೈನ್, ಗುಂಜೀನವರ ಲೈನ್, ಭಟ್ಟರ ಲೈನ್, ಪಿ.&ಟಿ. ರಸ್ತೆ, ಮದ್ಲಿ ಓಣಿ, ಕೊನೇರಿ ಹೊಂಡ ಹಳೇ ಲೈನ್ , ಚವ್ಹಾಣ ಲೈನ್, ಮೀನದ ಮಾರ್ಕೆಟ್ ಲೈನ್, ಬಳಿಗಾರ ಲೈನ್, ಉಳಿದ ಕೆಲವು ಭಾಗಗಳು. ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಎಚ್.ಕೆ.ಪಾಟೀಲ ಜಿಲ್ಲಾ ಪ್ರವಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರ ಜೂನ್ 25 ರ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಜೂನ್ 25 ರಂದು ಬೆಳಿಗ್ಗೆ 10 ಗಂಟೆಗೆ ಧಾರವಾಡದಿಂದ ರಸ್ತೆ ಮೂಲಕ ಗದುಗಿಗೆ ಆಗಮಿಸುವರು. ಬೆ 11.30 ಗಂಟೆಗೆ ನಗರದ ಸ್ಟೇಶನ್ ರಸ್ತೆಯಲ್ಲಿನ ಎಮ್.ಜಿ. ಮಾರ್ಕೆಟ್ ಹತ್ತಿರದ ವಿಜಯಲಕ್ಷ್ಮಿ ಜ್ಯುವೆಲೆರ್ಸ್ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಸಂಜೆ 5 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಸಾರ್ವಜನಿಕರನ್ನು ಭೇಟಿ ಮಾಡುವರು. ಸಂಜೆ 6 ಗಂಟೆಗೆ ಪಂಚಾಕ್ಷರಿ ನಗರದ ಸುಕ್ಷೇತ್ರ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮ ಪೂಜ್ಯ ಗಾನಯೋಗಿ ಶಿವಯೋಗಿ ಲಿಂ.ಪಂ. ಪಂಚಾಕ್ಷರಿ ಗವಾಯಿಗಳ 80ನೇ ಪುಣ್ಯ ಸ್ಮರಣೋತ್ಸವ ಮತ್ತು ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳ 14ನೇ ಪುಣ್ಯಸ್ಮರಣೋತ್ಸವದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವರು.

ಸಂಜೆ 7.30 ಗಂಟೆಗೆ ಗದಗ ಜಿಲ್ಲಾ ಆಟೋ ಚಾಲಕರ ಮತ್ತು ಮಾಲಕರ ಸಂಘ ಹಾಗೂ ಜೈ ಭೀಮ ಆಟೋ ಚಾಲಕರ ಮತ್ತು ಮಾಲಕರ ಸಂಘದ ಸಭೆಯಲ್ಲಿ ಪಾಲ್ಗೊಳ್ಳುವರು. ರಾತ್ರಿ 9 ಗಂಟೆಗೆ ಗದಗನಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಗದಗ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮ | ಜಿಲ್ಲಾಧಿಕಾರಿಗಳಿಂದ ಸಾರ್ವಜನಿಕ ಅಹವಾಲು ಸ್ವೀಕಾರ

## ಜನಸ್ಪಂದನದಲ್ಲಿ ಅಹವಾಲುಗಳ ಸುರಿಮಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲಾ ಇಲಾಖೆಯ ಅಧಿಕಾರಿಗಳು ತಮಗೆ ಬಂದ ಅಹವಾಲುಗಳನ್ನು ನಿಷ್ಕಾಳಜಿ ತೋರದೆ ಶೀಘ್ರವೇ ವಿಲೇವಾರಿ ಮಾಡಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಗದಗ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಗದಗ ತಾಲೂಕಿನ ಸಾರ್ವಜನಿಕರಿಂದ ಅಹವಾಲು-ಕುಂದುಕೊರತೆ, ದೂರು ವಿಚಾರಣೆ ಹಾಗೂ ಪ್ರಕರಣ ವಿಲೇವಾರಿಯ ಗದಗ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಅಸುಂಡಿ ಗ್ರಾಮದ ವೀರಯ್ಯ ಶಿವಯ್ಯ ಗುರಬಶೆಟ್ಟೆಮಠ ಅವರು ನಿವೇಶನ ಖರಿದಿಸಿ ಮನೆಯನ್ನು ಕಟ್ಟಿ 3-4 ವರ್ಷವಾದರೂ ಯಾವುದೇ ರೀತಿಯ ಮೂಲಭೂತ ಸೌಲಭ್ಯಗಳು ಇಲ್ಲದ ಕಾರಣ ತೊಂದರೆಯಾಗುತ್ತಿದ್ದು, ಮನೆಗೆ ವಿದ್ಯುತ್ ಸಂಪರ್ಕವನ್ನು ಸಹ ತಾತ್ಕಾಲಿಕವಾಗಿ ತೆಗೆದುಕೊಂಡಿದ್ದರಿಂದ ತಿಂಗಳಿಗೆ 1ರಿಂದ 2 ಸಾವಿರ ರೂ ವಿದ್ಯುತ್ ಬಿಲ್ ಬರುತ್ತಿದೆ ಎಂದು ಹೇಳಿದರು. ಅಹವಾಲು ಸ್ವೀಕರಿಸಿದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸೂಚಿಸಿದರು.

ನರಸಾಪೂರ ಗ್ರಾಮದ ಈರಪ್ಪ ಕಾಳಪ್ಪ ಬಡಿಗೇರ ತಮ್ಮ ಕಾರ್ಮಿಕ ಕಾರ್ಡ್ ರದ್ದಾಗಿದ್ದು, ಹಲವು ಬಾರಿ ಕಾರ್ಮಿಕ ಇಲಾಖೆಗೆ ಹೋದರೂ



ಪ್ರಯೋಜನವಾಗಿಲ್ಲ ಎಂದು ಅಹವಾಲು ಸಲ್ಲಿಸಿದರು. ನಗರದ ಗಂಗಾಪೂರ ಪೇಟೆಯ ರೇಣುಕಾ ಹಾತಲಗೇರಿ ತಮಗೆ ಮನೆಯಿಲ್ಲದ ಕಾರಣ, ಮನೆ ಕೊಡಲು ಕೇಳಿದಾಗ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ನಿಯಮಾನುಸಾರ ಪರಿಶೀಲನೆ ನಡೆಸಿ ಮನೆ ನೀಡಲು ಸೂಚಿಸಿದರು.

ನಗರದ 1ನೇ ಕ್ರಾಸ್‌ನ ಹುಡ್ಕೊ ಕಾಲೋನಿಯ ಜಾಗೃತ ಗಜಾನನ ಸೇವಾ ಸಮಿತಿಯವರು, ಉದ್ಯಾನವನದಲ್ಲಿ ದೀಪಗಳು ಕೆಟ್ಟಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಅಹವಾಲು ನೀಡಿದರು. ಅದನ್ನು ಸ್ವೀಕರಿಸಿದ ಜಿಲ್ಲಾಧಿಕಾರಿಗಳು, ನಗರ ಸಭೆಯ ಪೌರಾಯುಕ್ತರಿಗೆ ಕೂಡಲೇ ಉದ್ಯಾನವನಕ್ಕೆ ಬೀದಿ ದೀಪ ಅಳವಡಿಸಲು ಸೂಚನೆ ನೀಡಿದರು.

ನಗರದ ನಿವಾಸಿ ರಮೇಶ ಮೇರೆವಾಡೆ ಹಿರಿಯ ನಾಗರಿಕರಿಗೆ ನಗರ ಸಂಚಾರಿ ಬಸ್‌ಗಳು ಸರಿಯಾಗಿ ಲಭ್ಯವಿಲ್ಲದ ಕಾರಣ ಹಾಗೂ ರಸ್ತೆಯಲ್ಲಿರುವ ಗುಂಡಿ ಸೇರಿದಂತೆ ಸಾರ್ವಜನಿಕ ಉದ್ಯಾನವನದ ಅವ್ಯವಸ್ಥೆ ಸರಿಪಡಿಸುವಂತೆ ಅಹವಾಲು ನೀಡಿದರು. ಅದನ್ನು ಸ್ವೀಕರಿಸಿದ ಜಿಲ್ಲಾಧಿಕಾರಿಗಳು, ಬಸ್‌ಗಳು ಸರಿಯಾದ ಸಮಯಕ್ಕೆ ಹೋಗುವಂತೆ ನೋಡಿಕೊಳ್ಳಬೇಕೆಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚನೆ ನೀಡಿದರು.

ಹುಲಕೋಟಿ ಹದ್ದಿನ ಅಸುಂಡಿ ಗ್ರಾಮದ ರಿಸ್.ನಂ.339/1ರಿಂದ 34ರ ವರೆಗಿನ 50 ಎಕರೆಗೂ ಹೆಚ್ಚು ಹೊಲಗಳಿಗೆ ದಾರಿಯಿಲ್ಲದ ಕಾರಣ ಬೆಳೆ ಬೆಳೆಯಲು ತೊಂದರೆಯಾಗುತ್ತಿದೆ ಎಂದು ಗ್ರಾಮಸ್ಥರು ಅಹವಾಲು ನೀಡಿದರು. ಅದನ್ನು ಸ್ವೀಕರಿಸಿದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ತಹಸೀಲ್ದಾರಿಗೆ ನಿಯಮಾನುಸರ ಪರಿಶೀಲನೆ ಮಾಡಿ ಎಂದು ಸೂಚಿಸಿದರು.

ರಾಜೀವಗಾಂಧೀ ನಗರದ ನಿವಾಸಿಯಾದ ರಮೇಶ ಕೋಳೂರ ಪ್ರತಿ ತಾಲೂಕು ಮಟ್ಟದಲ್ಲಿ ನಡೆಯಬೇಕಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುಂದು-ಕೊರತೆ ಸಭೆಗಳು ಸರಿಯಾದ ಸಮಯಕ್ಕೆ ನಿಯಮಿತವಾಗಿ ಜರುಗುತ್ತಿಲ್ಲ ಎಂದು ಅಹವಾಲು ನೀಡಿದರು. ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ, ನಿಯಮಿತವಾಗಿ ಸಭೆಗಳನ್ನು ಜರುಗಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ ಕಾರ್ಯನಿರ್ವಾಹಣಾಧಿಕಾರಿ ಭರತ್ ಎಸ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಸಾರ್ವಜನಿಕರು ಹಾಜರಿದ್ದರು.

ಜನಸ್ಪಂದನ ಕಾರ್ಯಕ್ರಮದಲ್ಲಿ 57 ಅರ್ಜಿಗಳು ಸ್ವೀಕೃತವಾದವು. ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ ಸ್ವಾಗತಿಸಿದರು. ವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ ನಿರೂಪಿಸಿದರು.

> ಲಕ್ಕುಂಡಿ ಗ್ರಾಮದ ಉಮೇಶಗೌಡ ಯಲ್ಲಪ್ಪಗೌಡ ಪಾಟೀಲ್ ಅವರಿಗೆ ಬಂದ ಬೆಳೆ ಪರಿಹಾರ ಮತ್ತು ಪ್ರಧಾನಮಂತ್ರಿ ಕಿಸಾನ್ ಯೋಜನೆಯ ಹಣವನ್ನು ಬ್ಯಾಂಕ್‌ನವರು ತಮ್ಮ ಸಾಲದ ಖಾತೆಗೆ ಜಮಾ ಮಾಡಿಕೊಂಡಿದ್ದಾರೆ ಎಂದು ದೂರು ನೀಡಿದರು. ಈ ಬಗ್ಗೆ ಕೂಡಲೇ ಬೆಳೆ ಪರಿಹಾರದ ಹಣವನ್ನು ಹಿಂತಿರುಗಿಸುವಂತೆ ಸಂಬಂಧಿಸಿದ ಬ್ಯಾಂಕ್ ಮ್ಯಾನೇಜರ್‌ಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

### ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ಜಿ.ಎಸ್. ಪಾಟೀಲ

## ತರಬೇತಿಯೊಂದಿಗೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಅವಶ್ಯಕವಾಗಿದ್ದು, ರೋಣದಲ್ಲಿ ತೆರೆಯಲಾಗಿರುವ ತರಬೇತಿ ಕೇಂದ್ರದ ಲಾಭವನ್ನು ವಿದ್ಯಾರ್ಥಿಗಳು ಪಡೆದುಕೊಂಡು ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಪಟ್ಟಣದ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಸಭಾಭವನದಲ್ಲಿ ಎಸ್.ಆರ್. ಪಾಟೀಲ ಫೌಂಡೇಷನ್ ವತಿಯಿಂದ ತೆರೆಯಲಾಗಿರುವ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅನೇಕ ವಿದ್ಯಾರ್ಥಿಗಳಲ್ಲಿ ಐಎಎಸ್, ಐಪಿಎಸ್, ಕೆಎಎಸ್ ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು ಎನ್ನುವ ಹಂಬಲ ಇರುತ್ತದೆ. ಆದರೆ ಅವರಿಗೆ ಬಡತನ ಅಡ್ಡಿ ಬರುತ್ತದೆ. ಹೀಗಾಗಿ, ನಮ್ಮ ಜಿಲ್ಲೆಯ ವಿದ್ಯಾರ್ಥಿಗಳು ಕೂಡ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಒಳ್ಳೆಯ ಹುದ್ದೆಗಳನ್ನು



ಪಡೆದುಕೊಳ್ಳಬೇಕು ಎಂಬ ನಿಟ್ಟಿನಲ್ಲಿ ನುರಿತ ತಜ್ಞರಿಂದ 60 ದಿನಗಳ ಕಾಲ ಉಚಿತ ತರಬೇತಿಯನ್ನು ನೀಡಲಾಗುತ್ತಿದೆ. ಆಸಕ್ತ ವಿದ್ಯಾರ್ಥಿಗಳು ಈ ತರಬೇತಿಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಎನ್.ಎಂ. ಬಿರಾದಾರ ಮಾತನಾಡಿ, ಕೆಲವೇ ದಿನಗಳಲ್ಲಿ 2.400 ವಿದ್ಯಾರ್ಥಿಗಳು ತರಬೇತಿಗೆ ನೋಂದಣಿ ಮಾಡಿಕೊಂಡಿದ್ದು ರಾಜ್ಯದಲ್ಲಿಯೇ ಮೊದಲ ಬಾರಿಯಾಗಿದೆ. ಕಾರಣ ಇಲ್ಲಿಯೂ ಸಹ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು ಎಂಬ ಭಾವನೆಯನ್ನು ಹೊಂದಿದ್ದಾರೆ ಎನ್ನುವುದು ಅರ್ಥವಾಗುತ್ತದೆ ಎಂದ ಅವರು, ಕಷ್ಟದ ಹಾದಿಯನ್ನು ಸವೆಸಿದಾಗ ಮಾತ್ರ ಸುಖ ಸಿಗಲು ಸಾಧ್ಯ ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕು ಎಂದರು.

ಐ.ಎಸ್. ಪಾಟೀಲ, ಸಿದ್ದಣ್ಣ ದಳವಾಯಿ, ಅಶೋಕ ಮಿರ್ಜಿ, ವಿ.ಆರ್. ಗುಡಿಸಾಗರ, ಸಂಗನಗೌಡ ಪಾಟೀಲ, ಅಂದಪ್ಪ ಬಿಚ್ಚೂರ, ಎಚ್.ಎಸ್. ಸೋಂಪುರ, ಸಿದ್ದಣ್ಣ ಬಂಡಿ, ಬಸವರಾಜ ನವಲಗುಂದ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ, ಪ್ರಭು ಮೇಟಿ, ಮುತ್ತಣ್ಣ ಸಂಗಳದ, ಪಿ.ಬಿ. ಅಳಗವಾಡಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

> ತರಬೇತಿಯ ಸಂದರ್ಭದಲ್ಲಿ ಇಸ್ರೋದ ವಿಜ್ಞಾನಿಗಳ ತಂಡದಿಂದಲೂ ವಿದ್ಯಾರ್ಥಿಗಳಿಗೆ ಕಾರ್ಯಾಗಾರ ನಡೆಸುವ ಉದ್ದೇಶ ಹೊಂದಲಾಗಿದೆ. ಜಿಲ್ಲೆಯ ಹಾಗೂ ತಾಲೂಕಿನ ವಿದ್ಯಾರ್ಥಿಗಳು ಇದರ ಲಾಭವನ್ನು ಪಡೆದುಕೊಳ್ಳಬೇಕು.
>
> **– ಟಿ.ಈಶ್ವರ.**

### ವಿಡಿಯೋ ಸಂವಾದ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ ಎಚ್ಚರಿಕೆ

## ಸಮಸ್ಯೆ ಉದ್ಭವಿಸದಂತೆ ಕಾರ್ಯ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಎಲ್ಲ ರೈತ ಬಾಂಧವರು ತಾವು ಬಿತ್ತನೆ ಮಾಡಿದ ಬೆಳೆಗೆ ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಬೇಕು. ಈ ನಿಟ್ಟಿನಲ್ಲಿ ರೈತರಿಗೆ ಕೃಷಿ ಇಲಾಖೆಯ ಅಧಿಕಾರಿಗಳು ಅರಿವು ಮೂಡಿಸುವ ಮೂಲಕ ಸೂಕ್ತ ಮಾರ್ಗದರ್ಶನ ಮಾಡಬೇಕೆಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ವಿಡಿಯೋ ಸಂವಾದ ಸಭೆಯ ಮೂಲಕ ಮಾತನಾಡಿದರು.

ಮುಂಗಾರು ಬಿತ್ತನೆ ಕಾರ್ಯ ಈಗಾಗಲೇ ಆರಂಭವಾಗಿರುವುದರಿಂದ ರೈತರಲ್ಲಿ ಕೃಷಿ ಚಟುವಟಿಕೆ ಚುರುಕಿನಿಂದ ಕೂಡಿದ್ದು, ಅವರಿಗೆ ಅಗತ್ಯವಿರುವ ಬೀಜ, ಗೊಬ್ಬರ, ಕೀಟನಾಶಕಗಳ ಸಮರ್ಪಕವಾಗಿ ಪೂರೈಸಬೇಕು. ಈ ಪ್ರಕ್ರಿಯೆಯಲ್ಲಿ ನಿಷ್ಕಾಳಜಿ, ನಿಧಾನಗತಿ ಸಹಿಸಲಾಗದು. ಸಮಸ್ಯೆ ಉದ್ಭವಿಸದಂತೆ ಮುಂಜಾಗ್ರತೆಯಿಂದ ಇಲಾಖಾಧಿಕಾರಿಗಳು ಕಾರ್ಯನಿರ್ವಹಿಸಬೇಕು. ತಪ್ಪಿದಲ್ಲಿ



ಇಲಾಖಾಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದು ಎಚ್ಚರಿಸಿದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಮಾತನಾಡಿ, 2023ರ ಮುಂಗಾರು ಹಂಗಾಮಿನಲ್ಲಿ 1,11,695 ರೈತರು ವಿಮಾ ಕಂತು ಪಾವತಿ ಮಾಡುವ ಮೂಲಕ ರೂ.252 ಕೋಟಿ ವಿಮಾ ಮೊತ್ತ ಪಾವತಿಯಾಗಿದ್ದು, ರಾಜ್ಯದಲ್ಲಿಯೇ ವಿಮಾ ಕಂತು ಪಾವತಿಯಲ್ಲಿ ಎರಡನೇ ಸ್ಥಾನದಲ್ಲಿದೆ. 2023ರ ಹಿಂಗಾರು ಬೆಳೆಗಳಿಗೆ 1,00,211 ರೈತರು ವಿಮಾ ಕಂತು ಪಾವತಿಸಿದ್ದಾರೆ. ಪ್ರಸಕ್ತ ಸಾಲಿನ ಬಿತ್ತನೆಗೆ ಅಗತ್ಯದ ಗೊಬ್ಬರ, ಕೀಟನಾಶಕ , ಬಿತ್ತನೆ ಬೀಜ ಸರಬರಾಜು ಸಮರ್ಪಕವಾಗಿ ಮಾಡಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಮಳೆಗಾಲ ಆರಂಭವಾಗಿದ್ದು, ಸಾರ್ವಜನಿಕರಿಗೆ ಕುಡಿಯಲು ಸರಬರಾಜು ಮಾಡುವ ನೀರಿನ ಪರೀಕ್ಷೆ ಕಡ್ಡಾಯವಾಗಿ ಮಾಡಬೇಕು. ಕುಡಿಯಲು ಸೂಕ್ತವೆಂದೆನಿಸಿದಲ್ಲಿ ಮಾತ್ರವೇ ಸರಬರಾಜು ಮಾಡಬೇಕು. ಗ್ರಾಮಗಳಲ್ಲಿ ಸಾಂಕ್ರಾಮಿಕ ರೋಗಗಳ ಕುರಿತು ಜಾಗೃತಿ ಮೂಡಿಸುವ ಮೂಲಕ ಜನಸಾಮಾನ್ಯರ ಆರೋಗ್ಯ ಸಂರಕ್ಷಣೆ ಮಾಡುವಂತೆ ಆರೋಗ್ಯ ಇಲಾಖೆ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಅಧಿಕಾರಿಗಳಿಗೆ ಸಿ.ಶಿಖಾ ಸೂಚಿಸಿದರು. ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟೆಮನಿ ಮಾತನಾಡಿ, ಜಿಲ್ಲೆಯಲ್ಲಿ ಶೇ 20ರಷ್ಟು ಬಿತ್ತನೆಯಾಗಿದೆ. 35 ಸಾವಿರಕ್ಕೂ ಅಧಿಕ ರೈತರು ತೋಟಗಾರಿಕಾ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಕಳೆದ ವಾರ ಜರುಗಿದ ಸಭೆಯಲ್ಲಿ ಸಂಸದರು ಸೂಚಿಸಿದಂತೆ ತೋಟಗಾರಿಕೆ ಜಿಲ್ಲೆಯನ್ನಾಗಿಸಲು ಡಿಪಿಆರ್ ತಯಾರಿಸುವಂತೆ ತಿಳಿಸಿದ್ದು, ಕ್ರಮ ವಹಿಸಲಾಗುತ್ತಿದೆ ಎಣದರು.

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ ಮಾತನಾಡಿ, ಇಲಾಖೆ ವ್ಯಾಪ್ತಿಯಲ್ಲಿ 62 ವಸತಿ ನಿಲಯಗಳಿವೆ. ಇದರಲ್ಲಿ 38 ಸ್ವಂತ ಕಟ್ಟಡ ಹಾಗೂ 24 ನಿವೇಶನ ಹೊಂದಿವೆ. ಈ ವರ್ಷ ಎರಡು ವಸತಿ ನಿಲಯಗಳು ಮಂಜೂರಾಗಿದ್ದು, ಈ ವಾರ ಆರಂಭವಾಗಲಿವೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿ ಅಮಿತ ಬಿದರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ ಮಾತನಾಡಿದರು. ನಂತರ ಮಾತನಾಡಿದ ಉಸ್ತುವಾರಿ ಕಾರ್ಯದರ್ಶಿಗಳು, ವಸತಿ ನಿಲಯಗಳಿಗೆ ಸಂಬಂಧಪಟ್ಟ ಇಲಾಖಾಧಿಕಾರಿಗಳು ಕಡ್ಡಾಯವಾಗಿ ಭೇಟಿ ಮಾಡಿ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ಕೈಗೊಂಡು, ಅಗತ್ಯವಿದ್ದಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಆದ್ಯತೆ ವಹಿಸಲು ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಿಇಓ ಭರತ್ ಎಸ್ ಮಾತನಾಡಿ, ರಾಷ್ಟ್ರೀಯ ತೋಟಗಾರಿಕಾ ಮಿಷನ್ ಬಳಸಿಕೊಂಡು ಶಾಶ್ವತ ತೋಟಗಾರಿಕಾ ಕ್ಷೇತ್ರವನ್ನು ಅಭಿವೃದ್ಧಿಪಡಿಸಬೇಕು. ಜಿಲ್ಲೆಯ ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ, ಗಜೇಂದ್ರಗಡ ತಾಲೂಕಿನ ಪ್ರದೇಶಗಳು ತೋಟಗಾರಿಕೆಗೆ ಉತ್ತಮ ವಾತಾವರಣ ಹಾಗೂ ನೀರಿನ ಲಭ್ಯತೆ ಇರುವುದರಿಂದ ಸದುಪಯೋಗ ರೈತರಿಗೆ ದೊರಕಿಸಿ ಎಂದರು. ಸಭೆಯಲ್ಲಿ ಡಿಎಚ್‌ಒ ಡಾ. ಎಸ್.ಎಸ್. ನೀಲಗುಂದ, ಜಿ.ಪಂ. ಮುಖ್ಯ ಯೋಜನಾಧಿಕಾರಿ ನಿರ್ಮಲಾ, ಲೆಕ್ಕಾಧಿಕಾರಿ ಪ್ರಶಾಂತ, ಡಿಡಿಪಿಐ ಎಂ.ಎ. ರಡ್ಡೇರ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಹುಲಗಣ್ಣವರ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ಗಂಗಾಧರ ಶಿರೋಳ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರ ವಿಜಯಕುಮಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಪ್ರಸಕ್ತ ವರ್ಷದಲ್ಲಿ ಈಗಾಗಲೇ ಮೊದಲ ತ್ರೈಮಾಸಿಕ ಮುಕ್ತಾಯದ ಹಂತದಲ್ಲಿದ್ದು ಇಲಾಖಾ ಮುಖ್ಯಸ್ಥರು ತಮಗೆ ನೀಡಿದ ಆರ್ಥಿಕ ಭೌತಿಕ ಗುರಿ ಸಾಧನೆಗೆ ಗಮನ ಹರಿಸಬೇಕು. ಶೀಘ್ರವೇ ಟೆಂಡರ್ ಪ್ರಕ್ರಿಯೆ ಅಂತಿಮಗೊಳಿಸಿ ಕಾಮಗಾರಿಗಳನ್ನು ನಿರ್ವಹಿಸಬೇಕು. ಕಾಮಗಾರಿಗಳ ಅನುಷ್ಠಾನದಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು. ಯಾವುದೇ ಕಾರಣಕ್ಕೂ ನೀಡಿದ ಅನುದಾನ ಮರಳಿ ಹೋಗದಂತೆ ಇಲಾಖಾ ಮುಖ್ಯಸ್ಥರು ನಿಗಾ ವಹಿಸಲು ಭರತ್ ಎಸ್ ಸೂಚಿಸಿದರು.

> ವಿಮಾ ಮಾಡಿಸಿದ ಅರ್ಹ ರೈತಬಾಂಧವರೆಲ್ಲರೂ ಪ್ರಕೃತಿ ವಿಕೋಪ, ಅತಿವೃಷ್ಟಿ ಸಂಭವಿಸಿದಲ್ಲಿ ಆರ್ಥಿಕ ನಷ್ಟವನ್ನು ಸರಿದೂಗಿಸಲು ವಿಮಾ ಪರಿಹಾರ ಸಹಕಾರಿಯಾಗಿದೆ. ತಪ್ಪದೇ ರೈತಬಾಂಧವರು ವಿಮಾ ಮಾಡಿಸಲು ಅಧಿಸೂಚಿತ ಬೆಳೆಗಳಿಗೆ ವಿಮಾ ಕಂತು ಪಾವತಿಸಲು ಜಾಗೃತಿ ಮೂಡಿಸಲು ಕೃಷಿ ಇಲಾಖೆ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು.
>
> **– ಸಿ.ಶಿಖಾ.**
> **ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ.**

## ಸಂಪಾದಕೀಯ

# ಕಾಂಗ್ರೆಸ್ ಸರ್ಕಾರದ ಸಚಿವರಿಗೆ ಬುದ್ಧಿ ಬರುವುದು ಯಾವಾಗ?

ರಾಜ್ಯ ಸರ್ಕಾರದಲ್ಲಿರುವ ಮಂತ್ರಿಗಳು ಈಗ ಉಪಮುಖ್ಯಮಂತ್ರಿ ಹುದ್ದೆಯ ಕನಸು ಕಾಣುತ್ತಿದ್ದಾರೆ. ಹೀಗಾಗಿಯೇ ಕಾಂಗ್ರೆಸ್ ಸರ್ಕಾರದ ಸಚಿವರಿಗೆ ಬುದ್ಧಿ ಬರುವುದು ಯಾವಾಗ ಎನ್ನುವಂತಹ ಪ್ರಶ್ನೆಯನ್ನ ಅತ್ಯಂತ ಖಾರವಾಗಿಯೇ ಕೇಳಬೇಕಾಗಿದೆ.

ಲೋಕಸಭೆ ಚುನಾವಣೆಯಲ್ಲಿ ಮುಖಭಂಗ ಅನುಭವಿಸಿರುವ ಕಾಂಗ್ರೆಸ್ ನಾಯಕರು, ಭವಿಷ್ಯದಲ್ಲಿ ಪಕ್ಷವನ್ನ ಮತ್ತಷ್ಟು ಗಟ್ಟಿಗೊಳಿಸಬೇಕಾದರೆ ಅತಿ ಹೆಚ್ಚು ಉಪಮುಖ್ಯಮಂತ್ರಿ ಸ್ಥಾನಗಳನ್ನ ಕೊಡಬೇಕು ಎನ್ನುವ ವಾದವನ್ನ ಮುಂದಿಡುತ್ತಿರುವುದು ಅತ್ಯಂತ ಹಾಸ್ಯಸ್ಪದವಾಗಿದೆ.

ಸಮುದಾಯಕ್ಕೊಂದು ಮುಖ್ಯಮಂತ್ರಿ ಹುದ್ದೆ ಕೊಟ್ಟರೆ ಆಯಾ ಸಮುದಾಯಗಳು ಕಾಂಗ್ರೆಸ್ ಗೆ ಬೆಂಬಲ ಸೂಚಿಸುತ್ತವೆ ಎನ್ನುವ ಕಾಂಗ್ರೆಸ್ ಹಿರಿಯ ಸಚಿವರ ವಾದ ಎಳ್ಳಷ್ಟು ಒಪ್ಪುವಂತಹದ್ದಲ್ಲ.

ಮೊದಲಿಗೆ ಉಪಮುಖ್ಯಮಂತ್ರಿ ಹುದ್ದೆ ಎನ್ನುವುದು ಸಾಂವಿಧಾನಿಕ ಹುದ್ದೆಯಲ್ಲ. ಕೊಟ್ಟಿರುವ ಒಂದು ಖಾತೆಯನ್ನು ಇಟ್ಟುಕೊಂಡು ಉಪಮುಖ್ಯಮಂತ್ರಿ ಎನಿಸಿಕೊಳ್ಳುವುದು ಅತ್ಯಂತ ಸಣ್ಣತನ ಎನಿಸಿಕೊಳ್ಳುತ್ತದೆ ಎನ್ನುವ ಸಣ್ಣ ಪರಿಜ್ಞಾನವೂ ಈ ಸಚಿವರಿಗೆ ಇಲ್ಲ.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧದ ರಾಜಕೀಯ ಕಾರಣಕ್ಕಾಗಿ ಇಂತಹ ಉಪಮುಖ್ಯಮಂತ್ರಿ ಹುದ್ದೆ ಕೇಳುವುದು, ರಾಜಕೀಯ ಸಣ್ಣತನ ಎನಿಸಿಕೊಳ್ಳುತ್ತದೆ.

ಸದ್ಯ ಉಪ ಮುಖ್ಯಮಂತ್ರಿ ಹುದ್ದೆಯ ಬಗ್ಗೆ ವಾದ ವಿವಾದಗಳನ್ನ ಮತ್ತು ಆಸೆ ಆಕಾಂಕ್ಷೆಗಳನ್ನು ಇಟ್ಟುಕೊಂಡಿರುವಂತಹ ಸಚಿವರು, ಸದ್ಯ ಈಗಿರುವ ಸಚಿವ ಸ್ಥಾನವನ್ನು ಇಟ್ಟುಕೊಂಡು ಏನು ಕೆಲಸ ಮಾಡಲು ಸಾಧ್ಯ? ಉಪಮುಖ್ಯಮಂತ್ರಿ ಆದರೆ ಇನ್ನಷ್ಟು ಹೆಚ್ಚಿನ ಕೆಲಸಗಳನ್ನ ಹೇಗೆ ಮಾಡಲು ಸಾಧ್ಯ ಎನ್ನುವ ಬಗ್ಗೆ ಯಾರೊಬ್ಬರೂ ಮಾತನಾಡುತ್ತಿಲ್ಲ.

ಮಂತ್ರಿಗಿರಿ ಅನುಭವಿಸುತ್ತಿರುವ ಸಚಿವರು ತಾವು ಉಪಮುಖ್ಯಮಂತ್ರಿ ಎನಿಸಿಕೊಳ್ಳಬೇಕು ಎನ್ನುವ ದುರಾಸೆ ಬಿಟ್ಟರೆ ಬೇರೆ ಕಾರಣಗಳೆ ಇಲ್ಲ. ಇಂತಹ ಅಜ್ಞಾನದ ಪರಿಧಿಯಿಂದ ಕಾಂಗ್ರೆಸ್ ಸಚಿವರು ಹೊರ ಬಂದರೆ ಮಾತ್ರ ಭವಿಷ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಲೆ.

ಲಿಂ. ಪಂಚಾಕ್ಷರ ಗವಾಯಿಗಳವರ, ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೋತ್ಸವ

# ಉಭಯ ಶ್ರೀಗಳ ದಿವ್ಯಾತ್ಮ ಇಂದಿಗೂ ಅಮರ

■ ವಿಜಯಸಾಕ್ಷಿ ಸುದ್ದಿ, ಗದಗ

ವೀರೇಶ್ವರ ಪುಣ್ಯಾಶ್ರಮ ಹಾಗೂ ಕಾಶಿ ಮಠಕ್ಕೂ ಅವಿನಾಭಾವ ಸಂಬಂಧವಿದೆ ಎಂದು ಕಾಶಿ ಪೀಠದ ಪೂಜ್ಯಶ್ರೀ ಜ.ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂಚಾಕ್ಷರಿ ಗವಾಯಿಗಳವರ 80ನೇ ಪುಣ್ಯ ಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ, ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಶನಿವಾರ ಜರುಗಿದ ಧರ್ಮಸಭೆ ಹಾಗೂ ಕೀರ್ತನ ಸಮ್ಮೇಳನದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಕಾಶೀಪೀಠದ ಪೂರ್ವಾಶ್ರಮದ ಅಮರೇಶ್ವರ ಮಠದ ಅಮರೇಶ್ವರ ಶ್ರೀಗಳು ಸಂಗೀತವನ್ನು ಕಲಿಯಲು ಗದುಗಿನ ವೀರೇಶ್ವರ ಪುಣ್ಯಾಶ್ರಮಕ್ಕೆ ಬಂದು ಪಂಚಾಕ್ಷರಿ ಗವಾಯಿಗಳವರ ಶಿಷ್ಯರಾಗಿ ಸಂಗೀತ ಜ್ಞಾನವನ್ನು ಪಡೆದಿದ್ದಾರೆ. ಎಲ್ಲ ಸಂಪತ್ತುಗಳಲ್ಲಿ ಜ್ಞಾನ ಸಂಪತ್ತು ದೊಡ್ಡದು. ಬೇರೆ ಸಂಪತ್ತು ಹಂಚಿದರೆ ಕರಗಿ ಹೋಗುತ್ತದೆ. ಆದರೆ, ಜ್ಞಾನ ಸಂಪತ್ತು ಹಂಚಿದರೆ ದ್ವಿಗುಣವಾಗುತ್ತ ಹೋಗುತ್ತದೆ. ಅಂಧರ ಬಾಳಿಗೆ ಜ್ಞಾನದೀಪವನ್ನು ವೀರೇಶ್ವರ ಪುಣ್ಯಶ್ರಮ ನಿರಂತರವಾಗಿ



ನೀಡುತ್ತ ಬಂದಿದೆ. ಶಿವನನ್ನು ಪೂಜೆ ಮಾಡಬೇಕಾದರೆ ಶಿವನಾಗಿ ಮಾಡಬೇಕು. ಅದರಂತೆ ಶಿವಯೋಗಿ ಪಂ. ಪುಟ್ಟರಾಜ ಗವಾಯಿಗಳನ್ನು ನಾವು ಕಂಡಿದ್ದೇವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸೂಡಿ ಜುಕ್ತಿಹಿರೇಮಠದ ಪೂಜ್ಯಶ್ರೀ ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ವೀರೇಶ್ವರ ಪುಣ್ಯಾಶ್ರಮದಂತಹ ಗುರುಕುಲ ಜಗತ್ತಿನಲ್ಲಿಯೇ ಎಲ್ಲೂ ಇಲ್ಲ. ಇದು ಸುಖದ ಆಶ್ರಮವಲ್ಲ ಇದನ್ನು ಕಟ್ಟಿ ಬೆಳೆಸಲು ಗುರುಗಳೊಂದಿಗೆ ಹೋರಾಟ ಮಾಡಿದ ಸಾಕಷ್ಟು ಹಿರಿಯ ಜೀವಿಗಳು ನಮ್ಮ ಕಣ್ಮುಂದೆ ಇದ್ದಾರೆ. ಸಮಾಜಕ್ಕೆ ಬೇಡವಾದ ಮಕ್ಕಳನ್ನು ಸಾಕಿ ಸಲುಹಿ ಅವರಿಗೆ ಸಂಸ್ಕಾರ, ಶಿಕ್ಷಣ, ಸಂಗೀತ ಜ್ಞಾನವನ್ನು ನೀಡಿ ಅವರ ಬಾಳನ್ನು ಬೆಳಗಿಸಿದವರು ಉಭಯ ಶ್ರೀಗಳು ಎಂದು ಹೇಳಿದರು.

ಅಡ್ನೂರ ಬೃಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಬೈಲಹೊಂಗಲದ ಡಾ. ಮಹಾಂತಯ್ಯ ಸ್ವಾಮಿಗಳು ಆರಾದ್ರಿಮಠ, ಗದಗಿನ ಅಡವಿಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ಪೂಜ್ಯಶ್ರೀ ಮಹೇಶ್ವರಸ್ವಾಮೀಜಿ ಹೊಸಳ್ಳಿಮಠ ಅವರುಗಳು ಸಮ್ಮುಖ ವಹಿಸಿದ್ದರು. ಪೂಜ್ಯಶ್ರೀ ಕಲ್ಲಯ್ಯಜ್ಜನವರು ಆಭಾರ ಮನ್ನಣೆ ಸಲ್ಲಿಸಿದರು.

ಶ್ರೀ ಕುಮಾರೇಶ್ವರ ಕೃಪಾಪೋಷಿತ ಡಾ. ಪಂ.ಪುಟ್ಟರಾಜ ಕವಿ ಗವಾಯಿಗಳವರ ಸಂಸ್ಕೃತ ಪಾಠಶಾಲೆಯ ವಿದ್ಯಾರ್ಥಿಗಳಿಂದ ವೇದಘೋಷ ಜರುಗಿತು. ಶ್ರೀಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ವೀರೇಶ ಕೂಗು ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರು ಬಾಳಿಹಳ್ಳಿಮಠ ಅತಿಥಿಗಳನ್ನು ಸ್ವಾಗತಿಸಿದರು. ಶರಣಸೋಮನಾಳದ ಮಹದೇವಯ್ಯ ಶಾಸ್ತ್ರಿಗಳು ನಿರೂಪಿಸಿದರು.

ಮುಖ್ಯ ಅತಿಥಿಗಳಾಗಿ ಪಂ. ರಾಜಗುರು ಗುರುಸ್ವಾಮಿ ಕಲಕೇರಿ, ವೀರೇಶ್ವರ ಪುಣ್ಯಾಶ್ರಮ ಸೋಲ್ ಟ್ರಸ್ಟನ ಅಧ್ಯಕ್ಷ ನಿಂಗಪ್ಪ ಕೆಂಗಾರ, ಜಿಮ್ಸ್ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಎಸ್. ಕರೇಗೌಡ್ರ, ಡಾ. ವಿ.ಎಂ. ಮಲ್ಲಗೌಡ್ರ, ಪಿ.ಸಿ. ಹಿರೇಮಠ, ಎಂ.ಆರ್. ಹಿರೇಮಠ, ಲಿಂಗರಾಜ ಗುಡಿಮನಿ, ಅನಿಲ್ ಅಬ್ಬಿಗೇರಿ, ಪ್ರಶಾಂತ ಶಾಬಾದಿಮಠ, ಮಹೇಶ ಶಾಬಾದಿಮಠ, ವಿಜಯಕುಮಾರ ಹಿರೇಮಠ, ವಿ.ಎಸ್. ಮಾಳೆಕೊಪ್ಪಮಠ, ಅಂಬರೀಶ ಹಿರೇಮಠ, ಜಿ.ಬಿ. ನೀಲರೆಡ್ಡಿ, ಎಂ.ಎಂ. ಕುಕನೂರ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಬೆಳಿಗ್ಗೆ 11 ಗಂಟೆಗೆ ಪೂಜ್ಯರಿಂದ ಶ್ರೀಗುರು ರಕ್ಷೆ ನೀಡಲಾಯಿತು. ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಅಡ್ನೂರ ದಾಸೋಹಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯವಹಿಸಿದ್ದರು. ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಧ್ಯಕ್ಷತೆ ವಹಿಸಿದ್ದರು. ಅರಳಿಕಟ್ಟಿಯ ಗಂಗಾಧರಯ್ಯ, ಧಾರವಾಡದ ಈರಪ್ಪ ಅಕ್ಕಿ, ಹುಬ್ಬಳ್ಳಿಯ ಚಂದ್ರಶೇಖರ ಶಿವಶಿಂಪಗೇರ, ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರಾದ ರುದ್ರಗೌಡ ರಬ್ಬನಗೌಡ್ರ, ಗೊಂಡಬಾಳದ ಶರಣಗೌಡ್ರ ಬಾವಿಕಟ್ಟಿ, ದೇವಪ್ಪ ಗುಗ್ಗರಿ, ಕೆಂಪಣ್ಣ ಹೂಗಾರ, ಸಿದ್ದಲಿಂಗಪ್ಪ ಶಿವಶಿಂಪಿ ಅವರಿಗೆ ಗುರುರಕ್ಷೆ ನೀಡಲಾಯಿತು.

**ಬಾಕ್ಸ್**

ರಾತ್ರಿ ಗಾನ ಶಿವಯೋಗಿ, ಕವಿಚಕ್ರವರ್ತಿ ಪದ್ಮಭೂಷಣ ಡಾ.ಪಂ. ಪುಟ್ಟರಾಜ ಕವಿ ಗವಾಯಿಗಳವರ ವಿರಚಿತ 'ಶ್ರೀ ಕೃಷ್ಣಗಾರುಡಿ' ಪೌರಾಣಿಕ ನಾಟಕವನ್ನು ವೀರೇಶ್ವರ ಪುಣ್ಯಾಶ್ರಮದ ವಿದ್ಯಾರ್ಥಿಗಳು ಪ್ರದರ್ಶಿಸಿದರು. ಈ ಕಾರ್ಯಕ್ರಮದಲ್ಲಿ ಅಡ್ನೂರ ದಾಸೋಹಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸಿದ್ದರು. ಶಿವಸಂಗಮ ಸಮೂಹ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಅಧ್ಯಕ್ಷತೆ ವಹಿಸಿದ್ದರು. ಎಸ್‌ಬಿಐನ ನಿವೃತ್ತ ಅಧಿಕಾರಿ ಪರಶುರಾಮ ಕಟ್ಟಿಮನಿ ನಾಟಕವನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಡಿಎಸ್ಪಿ ಜೆ.ಎಚ್. ಇನಾಮದಾರ, ಜೋಹರಾ ಕೌತಾಳ, ಗಣ್ಯ ವರ್ತಕರಾದ ನಾಡಗೌಡ್ರು ಅಪ್ಪಸಾಬ ಗೌಡ್ರು ಉಪಸ್ಥಿತರಿದ್ದರು.

# ನುಡಿದಂತೆ ನಡೆದ ದಿವ್ಯ ಪುರುಷ ಬಸವಣ್ಣ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ನಮ್ಮ ಬದುಕಿಗೆ ಬೇಕಾಗುವ ಆದರ್ಶ ಮೌಲ್ಯಗಳನ್ನು ಬಸವಾದಿ ಶರಣರ ವಚನ ಸಾಹಿತ್ಯದಿಂದ ಪಡೆಯಬಹುದಾಗಿದೆ. ದಾರ್ಶನಿಕರ, ಅನುಭಾವಿಗಳ, ಪೂಜ್ಯರ ಆದರ್ಶ ವಿಚಾರಗಳನ್ನು ಪಡೆದುಕೊಂಡು ಸುಂದರ ಜೀವನ ನಮ್ಮದಾಗಿಸಿಕೊಳ್ಳಬೇಕು ಎಂದು ನಿವೃತ್ತ ಪ್ರಾಚಾರ್ಯ ಎಂ.ಎಸ್. ಹೊಟ್ಟಿನ ಹೇಳಿದರು. ಪಟ್ಟಣದ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನಮಠದಲ್ಲಿ ನಡೆದ 1819ನೇ ಮಾಸಿಕ ಶಿವಾನುಭವದಲ್ಲಿ ಅವರು ಮಾತನಾಡಿದರು. ಬಸವಣ್ಣನವರು 12ನೇ ಶತಮಾನದಲ್ಲಿ ಹೊಸ ಮನ್ವಂತರವನ್ನು ಸೃಷ್ಟಿ ಮಾಡಿದರು. ಸಮುದಾಯದಲ್ಲಿ ಆತ್ಮಗೌರವ, ಆತ್ಮವಿಶ್ವಾಸಗಳ ಜೀವನ ಪ್ರಜ್ಞೆಯನ್ನು ಅರಳಿಸಿದರು. ಮಾನವ ಸಮಾಜದಲ್ಲಿ ಮನೆ ಮಾಡಿಕೊಂಡಿದ್ದ ಕೀಳರಿಮೆಗಳನ್ನು ಕಿತ್ತು ಹಾಕಿ ಸಮಾನತೆಯನ್ನು ಸಾಧಿಸಲು ಶ್ರಮಿಸಿದರು. ನುಡಿದಂತೆ ನಡೆದು ಲೋಕದ ಹಿತವನ್ನು ಬಯಸಿದ ದಿವ್ಯ ಪುರುಷ ಎಂದರು. ನೇತೃತ್ವ ವಹಿಸಿದ್ದ ಶ್ರೀಮಠದ ಉತ್ತರಾಧಿಕಾರಿ ಡಾ.ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ತಂದೆ-ತಾಯಿ ತಮ್ಮ ಮಕ್ಕಳಿಗೆ ಸಾಕಷ್ಟು ಹಣ ಖರ್ಚು ಮಾಡಿ ಶಿಕ್ಷಣವನ್ನು ನೀಡುತ್ತಾರೆ. ಆದರೆ ಸರಿಯಾಗಿ ಸಂಸ್ಕಾರ, ಸಂಸ್ಕೃತಿ ಕಲಿಸುವುದಿಲ್ಲ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿ ಕಲಿಸುವುದು ಮುಖ್ಯ ಎಂದರು.

ನಾಡೋಜ ಡಾ.ಅನ್ನದಾನೀಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಮುಖ್ಯಮಂತ್ರಿ ಪದಕಕ್ಕೆ ಆಯ್ಕೆ ಆಗಿರುವ ಆರ್‌ಎಫ್‌ಒ ವೀರೇಂದ್ರ ಮರಿಬಸಣ್ಣವರ ಅವರನ್ನು ಶ್ರೀಮಠದಿಂದ ಸನ್ಮಾನಿಸಿ ಗೌರವಿಸಲಾಯಿತು. ಜಗದ್ಗುರು ಅನ್ನದಾನೀಶ್ವರ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯ ಶಿಕ್ಷಕರು ಸಿಬ್ಬಂದಿ ಭಕ್ತಿಸೇವೆ ವಹಿಸಿಕೊಂಡಿದ್ದರು. ಶ್ರೀ ಚನ್ನಬಸವ ದೇವರು ಉಪಸ್ಥಿತರರು ಇದ್ದರು. ಜಗದ್ಗುರು ಅನ್ನದಾನೀಶ್ವರ ಅಕ್ಕನ ಬಳಗದವರು ಸಂಗೀತ ಸೇವೆ ಸಲ್ಲಿಸಿದರು. ಮುಖ್ಯ ಶಿಕ್ಷಕ ಎಸ್.ಎಸ್. ಇನಾಮತಿ ಕಾರ್ಯಕ್ರಮ ನಿರೂಪಿಸಿದರು.

# ಇಂಡಕ್ಷನ್ ಪ್ರೋಗ್ರಾಂ ಉದ್ಘಾಟನಾ ಸಮಾರಂಭ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಸೋಮವಾರ 2024-25ನೇ ಸಾಲಿನ ಮೊದಲ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಎರಡು ವಾರಗಳ "ಇಂಡಕ್ಷನ್ ಪ್ರೊಗ್ರಾಂ" ಕಾರ್ಯಕ್ರಮವನ್ನು ಕಾಲೇಜಿನ ಪ್ರಾಚಾರ್ಯರಾದ ಭರಮಪ್ಪ ಬಡಪ್ಪವರ ಉದ್ಘಾಟಿಸಿದರು.

ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಸರ್ಕಾರಿ ಪಾಲಿಟೆಕ್ನಿಕ್, ಗದಗ ಸಂಸ್ಥೆಯಲ್ಲಿ ಲಭ್ಯವಿರುವ ಅತ್ಯುತ್ತಮ ಸೌಲಭ್ಯಗಳಾದ ಅತಿ ಕಡಿಮೆ ಪ್ರವೇಶ ಶುಲ್ಕದಲ್ಲಿ ದೊರಕುವ ತಾಂತ್ರಿಕ ಶಿಕ್ಷಣ, ನುರಿತ ಅನುಭವಿ ಉಪನ್ಯಾಸಕ ವೃಂದ, ಸುಸಜ್ಜಿತ ಪ್ರಯೋಗಾಲಯ ಮತ್ತು ಗ್ರಂಥಾಲಯ, ವಾಚನಾಲಯ, ಪರೀಕ್ಷಾ ಪದ್ಧತಿ, ವಿವಿಧ ವಿದ್ಯಾರ್ಥಿ ವೇತನಗಳು, ಡಿಪ್ಲೋಮಾ ನಂತರ ವಿವಿಧ ಉದ್ಯೋಗಾವಕಾಶಗಳು, ಉನ್ನತ ವ್ಯಾಸಂಗದ ಅವಕಾಶ ಹಾಗೂ ಡಿಪ್ಲೊಮಾ- ಪಾಲಿಟೆಕ್ನಿಕ್ ತಾಂತ್ರಿಕ ಶಿಕ್ಷಣದ ಮಹತ್ವದ ಕುರಿತು ಸಮಗ್ರವಾದ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ನೀಡಿದರು.

ಕಾರ್ಯಕ್ರಮದಲ್ಲಿ ವಿಭಾಗಾಧಿಕಾರಿಗಳಾದ ಕೊಟ್ರಗೌಡ (ಸಿವಿಲ್ ವಿಭಾಗ), ಸಂಗಪ್ಪ ಬಣ್ಣನ್ನವರ (ಮೆಕ್ಯಾನಿಕಲ್ ವಿಭಾಗ) ಮತ್ತು ಕಚೇರಿ ಅಧೀಕ್ಷಕರಾದ ವೀರೇಶ್ ಕಂಠಿಮಠ, ರಮೇಶ ಮಾವಿನಕಾಯಿ, ಉಪನ್ಯಾಸಕರು, ಸಿಬ್ಬಂದಿಗಳು, ಮೊದಲ ವರ್ಷದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ವಿಭಾಗಾಧಿಕಾರಿ ಶ್ರೀಮತಿ ಜೈನಾಬಿ ( ಇ & ಸಿ) ಸ್ವಾಗತಿಸಿದರು. ಅತಿಥಿ ಉಪನ್ಯಾಸಕ ಮಂಜುನಾಥ ಬಾಳಿಕಾಯಿ ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಮಂಗಳಗೌರಮ್ಮ ಶಿವಸಿಂಪಿಗೇರ (ಸಿ.ಎಸ್.ವಿಭಾಗ) ವಂದಿಸಿದರು.

# ಬಿವಿವಿಯಲ್ಲಿ ಕಲಿಕಾ ಕೌಶಲ್ಯಗಳ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಸಿ.ಬಿ.ಎಸ್.ಇಯ ಸೆಂಟರ್ ಆಫ್ ಎಕ್ಸಲೆನ್ಸ್ ಬೆಂಗಳೂರು ವತಿಯಿಂದ ಹುಬ್ಬಳ್ಳಿ-ಧಾರವಾಡ ಶಾಲಾ ಶಿಕ್ಷಕರಿಗೆ ಸಕ್ರಿಯ ಕಲಿಕಾ ಕೌಶಲ್ಯಗಳ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಕಾರ್ಯಾಗಾರದಲ್ಲಿ ಹುಬ್ಬಳ್ಳಿ, ಧಾರವಾಡ, ನರೇಗಲ್, ರೋಣ, ಮುಂಡರಗಿ ಮುಂತಾದ ಸ್ಥಳಗಳ ಶಿಕ್ಷಕರು ಪಾಲ್ಗೊಂಡಿದ್ದರು. ಸಂಪನ್ಮೂಲ ವ್ಯಕ್ತಿಗಳಾದ ಡಾ. ಶುಬಾಂಗಿ ಮೋರೆ, ಆಚಲ ಕೊಂಗವಾಡ, ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ



ನಿರ್ದೇಶಕ ವಿನಾಯಕ್ ಆರ್., ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪ ಪ್ರಾಚಾರ್ಯ ಪಿ.ಜಿ. ಬ್ಯಾಳಿ ದೀಪ ಬೆಳಗಿಸಿ ಕಾರ್ಯಾಗಾರಕ್ಕೆ ಚಾಲನೆ ನೀಡಿದರು.

ಶಾಲೆಯ ಪಂ. ಪುಟ್ಟರಾಜ ಗವಾಯಿ ಸಂಗೀತ ತಂಡದ ಬಿಂದು ಗಂಗಣ್ಣವರ ಪ್ರಾರ್ಥನಾ ಗೀತೆ ಹಾಡಿದರು. ಶಿಕ್ಷಕಿ ಭುವನೇಶ್ವರಿ ಮುದಲಿಯಾರ ಸ್ವಾಗತಿಸಿ ನಿರೂಪಿಸಿದರು. ಹಿರಿಯ ಶಿಕ್ಷಕಿ ಶುಬಾಂಗಿನಿ ದಡ್ಡಿ ಅತಿಥಿಗಳನ್ನು ಪರಿಚಯಿಸಿದರು. ಶಿಕ್ಷಕಿ ರೇಣುಕಾ ಈಗರಾರ ವಂದಿಸಿದರು.

# ಶಾಲಾ ಮಕ್ಕಳಿಗೆ ಸ್ಟೀಲ್ ಲೋಟ ದೇಣಿಗೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕರ್ನಾಟಕ ಸರಕಾರದ ಶಾಲಾ ಮಕ್ಕಳಿಗೆ ಮಹತ್ವಪೂರ್ಣ ಕ್ಷೀರಭಾಗ್ಯ ಯೋಜನೆಯು ಜಾರಿಯಲ್ಲಿದ್ದು, ಮುಳಗುಂದ ಪಟ್ಟಣದ ಸರಕಾರಿ ಉರ್ದು ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಹಾಲು ಕುಡಿಯಲು ಸ್ಟೀಲ್ ಲೋಟಗಳನ್ನುಪಟ್ಟಣದ ನದಾಫ ಓಣಿ ಜಮಾತಿನ ಹಿರಿಯರಾದ ಚಮನಸಾಬ ಹಾದಿಮನಿಯವರು ದೇಣಿಗೆಯಾಗಿ ನೀಡದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬಡವರ ಮಕ್ಕಳು ಸರಕಾರಿ ಶಾಲೆಗೆ ಹೆಚ್ಚು ಬರುವುದರಿಂದ ಸೌಲಭ್ಯಗಳ ಕೊರತೆ ಇದ್ದರೆ ಮಕ್ಕಳು ಪಾಠದಲ್ಲಿ ಹಿಂದುಳಿಯುತ್ತಾರೆ. ಹೀಗಾಗಿ,




ಸರಕಾರದ ಯೋಜನೆಗಳಿಗೆ ಉಳ್ಳವರು ಕೈ ಜೋಡಿಸಿದರೆ ಮಕ್ಕಳಿಗೆ ಪೂರಕ ವಾತಾವರಣ ಸಿಗುತ್ತದೆ ಎಂದರು.

ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ. ಅಧ್ಯಕ್ಷ ಲಾಲಷಾಪೀರ ಮಕಾನದಾರ, ದುರ್ಗಿಗುಡಿ, ಮಕ್ತುಂಸಾಬ, ಇಸ್ಮಾಯಿಲ್ ದೊಡ್ಡಮನಿ, ಫಕ್ರುಸಾಬ ಹಾದಿಮನಿ, ಖಿದ್ಮತ್-ಎ-ಮಿಲ್ಲತ್ ಗ್ರೂಪ್‌ನ ಸದಸ್ಯರಾದ ತಾಜುದ್ದೀನ ಕಿಂಡ್ರೀ, ಹಮೀದ ಮುಜಾವರ, ಇಸ್ಮಾಯಿಲ್ ಖಾಜಿ, ರಾಜೇಸಾಬ ಸೈಯದಬಡೆ, ಮುನ್ನಾ ಡಾಲಾಯತ, ಮೆಹಬೂಬ ಕುರ್ತಕೋಟಿ, ದಾವಲಸಾಬ ಲಕ್ಷ್ಮೇಶ್ವರ, ದಾವೂದ್ ಜಮಾಲ್ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಗುರು ವಚನೋಪದೇಶದಿಂದ ಮುಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪುಣ್ಯ ಕಾರ್ಯಗಳಿಂದ ಆತ್ಮ ಶುದ್ಧಿಯಾಗುತ್ತದೆ. ವಚನ ಬಹಿರಂಗ ಸಾಧನವಾದರೆ, ಉಪದೇಶ ಅಂತರಂಗದ ಸಾಧನವಾಗಿದೆ. ಶ್ರೀಗುರುಗಳ ವಚನೋಪದೇಶವನ್ನು ಆಲಿಸಿದಾಗ ಮುಕ್ತಿ ದೊರೆ-ಯುತ್ತದೆ ಎಂದು ರನ್ನಬೆಳಗಲಿಯ ಸಿದ್ದಾರೂಡಮಠದ ಪೂಜ್ಯಶ್ರೀ ಕೃಷ್ಣೆಗೌಡ ಕೋಲೂರು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂ. ಪಂಚಾಕ್ಷರ ಗವಾಯಿಗಳವರ 8 ನೇ ಸ್ವರ ಸಮಾರಾಧನೆ ಹಾಗೂ ಡಾ. ಪಂ.ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಜರುಗಿದ ಕೈವಲ್ಯ ಪದ್ಧತಿ ಶಿವಯೋಗ ಶಿವಾನುಭವದಲ್ಲಿ ಮಾತನಾಡಿ, ಅಂತರಂಗ ಬಹಿರಂಗದಿಂದ




ಆತ್ಮಶುದ್ಧಿಯಾಗಬೇಕಾದರೆ ಗುರು ಉಪದೇಶ ಕೇಳಬೇಕು ಎಂದು ಹೇಳಿದರು.

ಕರಿಕಟ್ಟಿಯ ಕುಮಾರಶಾಸ್ತ್ರಿಗಳು ಹಿರೇಮಠ ಅವರು ಮಾತನಾಡಿ, ಯೋಗ ಮಾಡಿದರೆ ಶರೀರ ಗಟ್ಟಿಯಾಗುತ್ತದೆ, ಶಿವಯೋಗ ಮಾಡಿದರೆ ಆತ್ಮ ಗಟ್ಟಿಯಾಗುತ್ತದೆ. ಜೈಲಿನಿಂದ ಬಿಡುಗಡೆಯಾಗುವದು ಮುಕ್ತಿಯಲ್ಲ, ಸಾಲದಿಂದ ಮುಕ್ತನಾಗುವದು ಮುಕ್ತಿಯಲ್ಲ, ರೋಗದಿಂದ ಮುಕ್ತನಾಗುವದು ಮುಕ್ತಿಯಲ್ಲ. ಗುರುವಿನ ವಚನೋಪದೇಶದಿಂದ ಜೀವನಮುಕ್ತನಾಗಬೇಕು ಅಂದಾಗ ಮುಕ್ತಿ ಸಿಗುತ್ತದೆ ಎಂದು ಹೇಳಿದರು.

ಬ್ರಹನ್ಮಠ-ರಾಜೂರ-ಅಡ್ನೂರ-ಗದಗ ದಾಸೋಹ ಶ್ರೀಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಿ, ಶಿವನ ಸಾಯುಜ್ಯ ಪಡೆಯಲು ಅಂತರಂಗ ಶುದ್ಧಿಯಾಗಬೇಕು. ಗಡಗಿಯೊಳಗಿರುವ ಹೆಂಡದ ವಾಸನೆ ಹೋಗಬೇಕಾದರೆ ಗಡಗಿ ಒಳಗೆ ತೊಳೆಯಬೇಕು. ಹೊರಗೆ ತೊಳೆದರೆ ಹೆಂಡದ ವಾಸನೆ ಹೋಗುವದಿಲ್ಲ. ಅದೇ ರೀತಿ ದೇಹ ಎನ್ನುವ ಗಡಗಿಯನ್ನು ಅಂತರಂಗದ ಒಳಗೆ ತೊಳೆದಾಗ ಮನ, ದೇಹ ಶುದ್ಧಿಯಾಗುತ್ತದೆ. ಮನುಷ್ಯ ಜೀವನ ಮುಕ್ತನಾಗಬೇಕಾದರೆ ಶಿವಯೋಗ ಸಾಧನ ಬೇಕೆಂದು ಹೇಳಿದರು.

ರನ್ನಬೆಳಗಲಿಯ ಮಹಾಲಿಂಗ ಶಾಸ್ತ್ರಿಗಳು ಮಾತನಾಡಿದರು. ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಮ್ಮುಖ ವಹಿಸಿದ್ದರು. ರಘುನಂದ ಶಾಸ್ತ್ರಿಗಳು ಅರಳಗುಂಡಿಗಿ ಸ್ವಾಗತಿಸಿದರು. ಕದಮನಹಳ್ಳಿಯ ಪಂಚಾಕ್ಷರಿ ಶಾಸ್ತ್ರೀಗಳು ಹಾಗೂ ಸೋಮನಾಳದ ಸಿದ್ರಾಮಯ್ಯಶಾಸ್ತ್ರಿಗಳು ನಿರೂಪಿಸಿದರು.




ಗದಗ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂ. ಪಂಚಾಕ್ಷರ ಗವಾಯಿಗಳವರ 80ನೇ ಹಾಗೂ ಪಂ.ಪುಟ್ಟರಾಜ ಕವಿಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಪಂ. ಪುಟ್ಟರಾಜ ಕವಿ ಗವಾಯಿಗಳವರು ರಚಿಸಿದ ಶ್ರೀ ಗುರು ವಚನ ಪ್ರಭ, ಶ್ರೀ ಮಹಾದೇವಿ ಪುರಾಣಂ ಗ್ರಂಥಗಳನ್ನು ಹಾಗೂ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಾಹಿತ್ಯ ರಚಿಸಿದ ಶಿವಯೋಗಿ ಸಂತ ಪುಟ್ಟಯ್ಯಜ್ಜ ಧ್ವನಿ ಸುರುಳಿಯನ್ನು ಕಾಶಿ ಪೀಠದ ಪೂಜ್ಯ ಶ್ರೀ ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾಗಳವರು ಲೋಕಾರ್ಪಣೆಗೊಳಿಸಿದರು.

# ಚರ್ಮಗಂಟು ಕಾಯಿಲೆ ಲಸಿಕೆ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ವರ್ಷ ಜಾನುವಾರುಗಳಿಗೆ ಅಂಟಿದ್ದ ಚರ್ಮಗಂಟು ಕಾಯಿಲೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಜಾನುವಾರುಗಳಿಗೆ ಆರೋಗ್ಯ ಮತ್ತು ರೋಗ ನಿಯಂತ್ರಣ ಕಾರ್ಯಕ್ರಮದ ಯೋಜನೆಯಡಿಯಲ್ಲಿ ತಾಲೂಕಿನಾದ್ಯಂತ ಜಾನುವಾರುಗಳಿಗೆ ಉಚಿತ ಲಸಿಕೆ ನೀಡುವ ಕಾರ್ಯಕ್ರಮವನ್ನು ಜೂನ್ 20ರಿಂದ ಜುಲೈ 27ರವರೆಗೆ ಆಯೋಜಿಸಲಾಗಿದೆ ಎಂದು ಪಶು ವೈದ್ಯಾಧಿಕಾರಿ ಡಾ. ನೀಲಕಂಠ ಹವಳದ ಹೇಳಿದರು.

ಅವರು ಪಟ್ಟಣದ ರೈತರ ಮನೆ ಮನೆ ಮನೆಗೆ ತೆರಳಿ ಜಾನುವಾರುಗಳಿಗೆ ಉಚಿತ ಲಸಿಕೆಯನ್ನು ನೀಡಿ ರೈತರಿಗೆ ಈ ಕುರಿತು ಮಾಹಿತಿ ನೀಡಿದರು. ಚರ್ಮಗಂಟು ಕಾಯಿಲೆ ಬಹಳಷ್ಟು ಜಾನುವಾರುಗಳಿಗೆ ಹಾನಿಯುಂಟು ಮಾಡಿತ್ತು. ಈ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ಉಚಿತ ಲಸಿಕೆ ನೀಡುವ ಕಾರ್ಯವನ್ನು ಮಾಡಲಾಗುತ್ತಿದ್ದು, ಈ ಕಾರ್ಯಕ್ರಮ ಒಂದು ತಿಂಗಳ ಕಾಲ ನಡೆಯಲಿದೆ. ತಾಲೂಕಿನಾದ್ಯಂತ ರೈತರ ಮನೆಗಳಿಗೆ ಲಸಿಕಾಕಾರರು ಬಂದು ಜಾನುವಾರುಗಳಿಗೆ ಲಸಿಕೆ ಹಾಕುತ್ತಾರೆ. ರೈತರು ತಮ್ಮ ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರೈತರಾದ ಕುಬೇರಪ್ಪ ಮಹಾಂತಶೆಟ್ಟರ, ಸುನೀಲ ಮಹಾಂತಶೆಟ್ಟರ, ಪಶು ಆಸ್ಪತ್ರೆಯ ಸಿಬ್ಬಂದಿಗಳು ಇದ್ದರು.



ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಜನಾಬ ಸಲೀಂ ಅಹ್ಮದರು ಸರಕಾರದ ಮುಖ್ಯ ಸಚೇತಕರಾಗಿ ಆಯ್ಕೆಯಾಗಿ ಪ್ರಥಮ ಬಾರಿ ಗದಗ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಅವರನ್ನು ಜನಸಂಪರ್ಕ ಕಾರ್ಯಾಲಯದಲ್ಲಿ ಗದಗ ಶಹರ ಕಾಂಗ್ರೆಸ್ ಕಮಿಟಿ ಉಪಾಧ್ಯಕ್ಷ ಜ. ಮಹ್ಮಮದಹನ್ನಿಫ ಎನ್.ಶಾಲಗಾರ ನೇತೃತ್ವದಲ್ಲಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಅನ್ವರ ಶಿರಹಟ್ಟಿ, ಶಾರೂಖ್ ಹುಯಿಲಗೋಳ, ಯೂಸೂಫ ಡಂಬಳ, ಸೈಯದಖಾಲೀದ ಕೊಪ್ಪಳ ಉಪಸ್ಥಿತರಿದ್ದರು.

### ಜಿಲ್ಲಾ ಕಸಾಪ ವತಿಯಿಂದ ಡಾ. ಎಸ್.ಕೆ. ಪಲ್ಲೇದ ದತ್ತಿ ಉಪನ್ಯಾಸ

# ಒತ್ತಡ ಮುಕ್ತ ಬದುಕಿಗೆ ಯೋಗ ದಿವ್ಯೌಷಧ

■ವಿಜಯಸಾಕ್ಷಿ ಸುದ್ದಿ, ಗದಗ

ದೇಹವನ್ನು ರೋಗಮುಕ್ತಗೊಳಿಸಿ, ಮನಸ್ಸನ್ನು ಶಾಂತಗೊಳಿಸಿ, ಜೀವನದ ಔನ್ನತ್ಯವನ್ನು ಸಾಧಿಸಲು ಭಾರತೀಯರು ಕಂಡುಹಿಡಿದ ಅಧ್ಭುತ ಕಲೆ ಯೋಗವಾಗಿದೆ. ಪತಂಜಲಿ ಮಹರ್ಷಿಗಳು ಸಂಶೋಧನೆಯ ಮೂಲಕ ದೇಹ ಮತ್ತು ಮನಸ್ಸಿನ ಆರೋಗ್ಯಕ್ಕೆ ಹಲವಾರು ಸೂತ್ರಗಳನ್ನು ತಿಳಿಸಿದ್ದಾರೆ. ಅವುಗಳನ್ನು ಅರಿತು ಆಚರಿಸುವದರ ಮೂಲಕ ಸ್ವಸ್ಥ ಸಮಾಜವನ್ನು ರೂಪಿಸಬಹುದಾಗಿದೆ. ಎಂದು ಆಯುರ್ವೇದ ತಜ್ಞ ಡಾ. ಉಮೇಶ ಪುರದ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಬಸವಯೋಗ ಮಂದಿರದಲ್ಲಿ ಡಾ. ಎಸ್.ಕೆ. ಪಲ್ಲೇದ ಸ್ಮರಣೆಯಲ್ಲಿ ಜರುಗಿದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಆಹಾರವೇ ಔಷಧಿಯಾಗಿದ್ದು, ವಾತ, ಪಿತ್ತ, ಕಫ ದೋಷದಿಂದ ಉಂಟಾಗುವ ರೋಗ-ರುಜಿನಗಳನ್ನು ಪ್ರಕೃತಿಯಲ್ಲಿ ಸಿಗುವ ಸಸ್ಯಗಳಿಂದಲೇ ನಿವಾರಿಸಬಹುದಾಗಿದೆ. ಆದಾಯದ ಬಹುಪಾಲು ಆಸ್ಪತ್ರೆಗೆ ವ್ಯಯ ಮಾಡದೇ ನಿತ್ಯಕರ್ಮವಾಗಿ ಯೋಗಾಸನ ಮತ್ತು ಪ್ರಾಣಾಯಾಮಗಳನ್ನು ರೂಢಿಸಿಕೊಳ್ಳುವದು ಇಂದಿನ ಅನಿವಾರ್ಯವಾಗಿದೆ ಎಂದು ತಿಳಿಸಿದರು.

ಕಿರಿಯ ವಯಸ್ಸಿನಲ್ಲಿಯೇ ಯೋಗ ಮತ್ತು ಆಯುರ್ವೇದ ಕುರಿತು ಸಾಧನೆಯನ್ನು ಮಾಡಿ ಭೌತಿಕವಾಗಿ ಅಗಲಿರುವ ಡಾ. ಶರಣಬಸಪ್ಪ ಪಲ್ಲೇದ ಅವರ ಜೀವನ ಸಾಧನೆ ಕುರಿತು ಡಾ. ದತ್ತಪ್ರಸನ್ನ ಪಾಟೀಲ ಮಾತನಾಡಿದರು. ದತ್ತಿ ದಾನಿಗಳು ಹಾಗೂ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯರಾದ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಅವರು ವೇದಿಕೆ ಮೇಲೆ ಉಪಸ್ಥಿತರಿದ್ದರು.




ಇದೇ ಸಂದರ್ಭದಲ್ಲಿ ಬಸವ ಯೋಗ ಮಹಾವಿದ್ಯಾಲಯ ಹಾಗೂ ಯೋಗ ಸಂಘಟನೆಗಳಿಂದ ವಾರವಿಡೀ ಜರುಗಿದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಸ್ಪರ್ಧಾಳುಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಯೋಗ ಶಿಬಿರದ ಯಶಸ್ಸಿಗೆ ಶ್ರಮಿಸಿದ ಸಂಪನ್ಮೂಲ ವ್ಯಕ್ತಿಗಳನ್ನು ಗೌರವಿಸಲಾಯಿತು.

ಡಿ.ಎಸ್. ಬಾಪುರಿ ಸ್ವಾಗತಿಸಿದರು. ಶಾರದಾ ಕಾತರಕಿ ನಿರೂಪಿಸಿದರು. ದತ್ತಪ್ರಸನ್ನ ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಡಾ. ಕಲ್ಲೇಶ ಮೂರಶಿಳ್ಳಿನ, ಡಾ. ರಾಜಶೇಖರ ದಾನರಡ್ಡಿ, ವೀರಪ್ಪ ಸವಡಿ, ಡಾ. ಅಶೋಕ ಮತ್ತಿಗಟ್ಟಿ, ಬಸವರಾಜ ವಾರಿ, ಎಂ.ಬಿ. ಕಿತ್ತೂರ, ಬಸವರಾಜ ಹಳ್ಳಿ, ದ್ಯಾಮಣ್ಣ ನರೇಗಲ್, ಪ್ರಕಾಶ ಮದ್ದಿನ, ರವಿ ಉಮಚಗಿ, ಸಂದೀಪ ನಡಗೇರಿ, ವಿಜಯಲಕ್ಷ್ಮಿ ಮೇಕಳಿ, ಸುಪ್ರಿಯಾ ಇಟಗಿ, ರತ್ನಾ ಪುರಂತರ, ಸುಮನ ಪಾಟೀಲ, ಗಿರಿಜಾ ನಾಲತ್ವಾಡಮಠ, ಸುಧಾ ಬಳ್ಳಿ, ಮಂಜುಳಾ ಇಟಗಿ, ಮಹಾದೇವಿ ಚರಂತಿಮಠ, ಅನ್ನಪೂರ್ಣ ಅಸೂಟಿ, ಎಂ.ಡಿ. ಹೊನ್ನಗುಡಿ, ಸುನಂದಾ ಅರಹುಣಸಿ, ಶಶಿಕಲಾ ಬೆಲ್ಲದ, ಶಾಂತಾ ಕುಂದಗೋಳ, ಎಸ್. ಎಸ್. ಮಾಲಶೆಟ್ಟಿ, ಅರುಣಾ ಇಂಗಳಳ್ಳಿ, ಲಲಿತಾ ಅಣ್ಣಿಗೇರಿ, ಕಸ್ತೂರಿ ಮರಿಗೌಡರ, ಪ್ರತಿಭಾ, ಪ್ರೇಮಾ ಹೊನ್ನಗುಡಿ, ದೀಪಾ, ಸುಪ್ರಿಯಾ, ಸುಧಾ ಪಾಟೀಲ, ಸುಮಂಗಲಾ ಹದ್ಲಿ, ಪುಷ್ಪಾ ತಿಪ್ಪಶೆಟ್ಟಿ, ಎಸ್.ಬಿ. ಮೆಣಸಗಿ, ವಿ.ಎಸ್. ದಲಾಲಿ, ಪ್ರ.ತೋ. ನಾರಾಯಣಪೂರ, ಯಶವಂತ ಮತ್ತೂರ, ಎಸ್.ಜೆ. ಸಂಜೀವಸ್ವಾಮಿ, ಗೌರಿ ಜೀರಂಕಳ್ಳಿ, ಸುನಂದಾ ಜ್ಞಾನೋಪಂತರ, ಡಾ. ವಿ.ಬಿ. ಮೇಟಿ, ಮಹಾಂತೇಶ ಪಿಡ್ಡನಗೌಡ್ರ, ಜಯಶ್ರೀ ಡಾವಣಗೇರಿ, ಅಮರೇಶರಾಂಪೂರ, ಅರ್ಜುನ ಸಿಂಗಟರಾಯನಕೇರಿ ಮೊದಲಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನಮ್ಮ ಹಿರಿಯರು ಪ್ರಕೃತಿಯನ್ನು ಅವಲೋಕಿಸಿ, ಸಂಶೋಧಿಸಿ ದೀರ್ಘಾಯುಷ್ಯವನ್ನು ಹೊಂದಲು ಸಹಾಯಕವಾಗುವ ಕಲೆಯನ್ನು ಯೋಗ ಮತ್ತು ಆಯುರ್ವೇದದ ಮೂಲಕ ನೀಡಿದ್ದಾರೆ. ಸ್ವಸ್ಥವಾದ ದೇಹದಲ್ಲಿ ಸ್ವಸ್ಥ ಮನಸ್ಸು ನೆಲೆಗೊಳ್ಳಲು ಸಾಧ್ಯ. ಮನಸ್ಸು ಮನುಷ್ಯನ ಹತೋಟಿಯಲ್ಲಿದ್ದಾಗ ಸಾಧನೆ ಸುಲಭವಾಗುತ್ತದೆ. ಈ ದಿಸೆಯಲ್ಲಿ ಮಕ್ಕಳಿಗೆ ಯೋಗ ಶಿಕ್ಷಣವನ್ನು ನಿಯಮಿತವಾಗಿ ರೂಢಿಸುವ ಅವಶ್ಯಕತೆ ಇದೆ ಎಂದು ತಿಳಿಸಿದರು.

# ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್‌ನಿಂದ "ಮುಂಗಾರು ರೈತರ ಬೆಳೆ ಸಮೀಕ್ಷೆ 2024" ನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ.

ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುವದರಿಂದ ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ. ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ವಿವರಗಳನ್ನು ದಾಖಲಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಹಾಗೂ 18004253553 ಗೆ ಕರೆ ಮಾಡಬಹುದಾಗಿದೆ.

# ಜೂ.28ರಂದು ಗಜೇಂದ್ರಗಡದಲ್ಲಿ ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜೂನ್ 28 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಪುರಸಭೆ ಗಜೇಂದ್ರಗಡದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸದರಿ ದಿನದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಲೋಕಾಯುಕ್ತ ಕಚೇರಿಯ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಗದಗ ಇವರ ವತಿಯಿಂದ 2024-25ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧರು, ಸಿಖ್ಖ, ಫಾರ್ಸಿ, ಜನಾಂಗದವರಿಗೆ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಡಿಯಲ್ಲಿ ನಿಗಮದಿಂದ ಸಾಲ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಏಇಂ ತುಚಿ ಅಇಖಿ/ಓಇಇಖಿ ನಲ್ಲಿ ಆಯ್ಕೆಯಾಗುವ Medical ( MBBS, BDS) Bachalor of Ayush, Bachelor of Engineering, Bachelor of Technology Bachelor or Architectures, Pharmacy, Agriculture Science, Veterinary And Farm Science ಇಂತಹ ಕೋರ್ಸ್‌ಗಳಿಗೆ ಆಯ್ಕೆಯಾದ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಅರಿವು ಯೋಜನೆಯಡಿ ಶೈಕ್ಷಣಿಕ ಸಾಲವನ್ನು ಪಡೆಯಲು ಆಪೇಕ್ಷಿಸುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ನಿಗಮದ ವೆಬ್‌ಸೈಟ್ https://kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜುಲೈ 7 ಕೊನೆಯ ದಿನವಾಗಿದೆ.

ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಕಂಪ್ಯೂಟರ್‌ನಲ್ಲಿ ಭರ್ತಿ ಮಾಡಿದ ಕೂಡಲೇ ಅರ್ಜಿಯನ್ನು ಪ್ರಿಂಟ್‌ಔಟ್ ಪಡೆದು ಕ್ಯೂ ಆರ್ ಕೋಡ್ ಹೊಂದಿದ ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಪಿಯುಸಿ/ಡಿಪ್ಲೋಮಾ ಅಂಕಪಟ್ಟಿ, ಆಧಾರ್ ಕಾರ್ಡ್, 04 ಪೋಟೋ, cet/neet ಹಾಲ್ ಟಿಕೇಟ್ ಪ್ರತಿಗಳು ಹಾಗೂ ನೋಟರಿ ಮಾಡಿಸಿದ ರೂ.50/- ಛಾಪಾ ಕಾಗದದಲ್ಲಿ ಇಂಡೆಮ್ನಿಟಿ ಬಾಂಡ್, ಈ ಎಲ್ಲಾ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ನಿಯಮಿತ ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ 1ನೇ ಮಹಡಿ ಜಿಲ್ಲಾ ನ್ಯಾಯಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಜಿಲ್ಲೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-295147 ಸಂಪರ್ಕಿಬಹುದಾಗಿದೆ.

# ತೋಂ. ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸಂಗೀತ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಸಂಗೀತ ದಿನವನ್ನು ಆಚರಿಸಲಾಯಿತು. ಸಾಂಸ್ಕೃತಿಕ ಸಮಿತಿಯು ಆಯೋಜಿಸಿದ್ದ ಈ ಕಾರ್ಯಕ್ರಮವು ವಿದ್ಯಾರ್ಥಿಗಳ ಸಂಗೀತ ಪ್ರತಿಭೆಗಳನ್ನು ಹೊರತರಲು ಒಂದು ಅನನ್ಯ ವೇದಿಕೆಯಾಯಿತು. ಪ್ರೊ. ಮಲ್ಲಿಕಾರ್ಜುನ ಜಿ.ಡಿ. ಮತ್ತು ಪ್ರೊ. ತೆಹಸಿನ್ ಶಿಗ್ಲಿ ಸಂಗೀತ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳೊಂದಿಗೆ ಜಾಗೃತಿ ಜಾಥಾ ನಡೆಸಿದರು.




ಪ್ರಾಂಶುಪಾಲ ಡಾ. ಎಮ್. ಎಮ್. ಅವಟಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಜಗದೀಶ ಶಿವನಗುತ್ತಿ ಮತ್ತು ಪ್ರೊ. ಸಂತೋಷಕುಮಾರ್ ಜಿ.ಎಂ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳಿಂದ ಗಾಯನ, ವಾದನ ಹಾಗೂ ನೃತ್ಯ ಪ್ರದರ್ಶನ ನಡೆಯಿತು.

ಕಾಲೇಜಿನ ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥ ಡಾ. ಈರಣ್ಣ ಕೋರಚಗಾಂವ 'ಸಂಗೀತ ಮತ್ತು ಮಾನಸಿಕ ಆರೋಗ್ಯ' ವಿಷಯದ ಬಗ್ಗೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ತಮ್ಮ ಅನುಭವವನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ರಮೇಶ ಬಡಿಗೇರ, ಪ್ರೊ. ಆರ್.ವಿ. ಕಡಿ, ಪ್ರೊ. ಐ.ಎಸ್. ಪಾಟೀಲ, ಪ್ರೊ. ಅಶ್ವಿನಿ ಅರಳಿ, ಪ್ರೊ. ಮಧುಸೂಧನ ಕುಲಕರ್ಣಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನೀಲ ಪಾಟೀಲ್, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಶಶಿಧರಗೌಡ ಸೇರಿದಂತೆ ಶಿಕ್ಷಕರು ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದರು.

# ಬೆಳೆ ಸಮೀಕ್ಷೆ ದಾಖಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಅತಿವೃಷ್ಟಿ, ಅನಾವೃಷ್ಟಿ, ಅಕಾಲಿಕ ಮಳೆ, ಮುಂತಾದ ಪ್ರಕೃತಿ ವಿಕೋಪಗಳು ಸೇರಿದಂತೆ ಹಲವಾರು ಕಾರಣಗಳಿಂದ ಬೆಳೆ ನಷ್ಟ ಉಂಟಾದಾಗ ರೈತರ ನೆರವಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ( ವಿಮಾ) ಯೋಜನೆಯನ್ನು 2024-25ನೇ ಸಾಲಿನಲ್ಲಿ ಸಹ ಜಾರಿಗೆ ತರಲಾಗಿದೆ.

ನೀರಾವರಿ ಆಧಾರಿತ ) ಭತ್ತ , ಮುಸುಕಿನ ಜೋಳ , ನೆಲಗಡಲೆ, ಹತ್ತಿ, ಜೋಳಗಳು ಹಾಗೂ (ಮಳೆ ಆಶ್ರಿತ ) ಮುಸುಕಿನ ಜೋಳ, ಜೋಳ, ಸಜ್ಜೆ, ನವಣೆ, ತೊಗರಿ, ಎಳ್ಳು, ನೆಲಗಡಲೆ, ಹತ್ತಿ ಈ ಬೆಳೆಗಳಿಗೆ ವಿಮೆ ನೋಂದಣಿ ಮಾಡಲು ಜುಲೈ 31 ಕೊನೆಯ ದಿನವಾಗಿರುತ್ತದೆ.

ಮಳೆ ಆಶ್ರಿತ ಹೆಸರು ಬೆಳೆ ನೋಂದಣಿಗೆ ಜುಲೈ 15 ಕೊನೆಯ ದಿನವಾಗಿದೆ. ನೀರಾವರಿ ಮತ್ತು ಮಳೆಯಾಶ್ರಿತ ಸೂರ್ಯಕಾಂತಿ ಬೆಳೆ ವಿಮೆ ನೋಂದಣಿಗೆ ಆಗಸ್ಟ್ 16 ಕೊನೆಯ ದಿನವಾಗಿದೆ.

ಬೆಳೆ ಸಾಲ ಪಡೆಯದ ರೈತರು ನೋಂದಣಿಗಾಗಿ ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಆಧಾರ್ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ/ ಪಾಸ್ ಬುಕ್ ಮತ್ತು ಆಧಾರ್ ಸಂಖ್ಯೆಯೊಂದಿಗೆ ಡಿ.ಸಿ.ಸಿ./ ಇತರೆ ಬ್ಯಾಂಕ್, ಗ್ರಾಮ್ ಒನ್ ಮತ್ತು ಸಿ.ಎಸ್.ಸಿ. ಕೇಂದ್ರಗಳಿಗೆ ಸಂಪರ್ಕಿಸಬಹುದಾಗಿದೆ.

ರೈತರು ನೋಂದಣಿಗಾಗಿ ಕಡ್ಡಾಯವಾಗಿ ಫ್ರೂಟ್ಸ್ ಐಡಿ( ಎಫ್‌ಐಡಿ) ಹೊಂದಿರಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗ ಜಿಲ್ಲೆಗೆ ಓರಿಯಂಟಲ್ ಜನರಲ್ ಇನ್ಶುರೆನ್ಸ್ ಕಂಪನಿಯನ್ನು ಅನುಷ್ಠಾನ ಸಂಸ್ಥೆಯನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗೀತದಿಂದ ರೋಗಗಳು ದೂರ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಂಗೀತದಿಂದ ಮನಸ್ಸಿಗೆ ಶಾಂತಿ ದೊರಕುತ್ತದೆ. ಸಂಗೀತವನ್ನು ಆಯಾ ಸಮಯದಲ್ಲಿ ಆಸ್ವಾದಿಸುವುದರಿಂದ ರೋಗಗಳು ಸಹ ದೂರವಾಗುತ್ತವೆ ಎಂದು ಅಬ್ಬಿಗೇರಿಯ ಪಂ. ಪಾಲಾಕ್ಷಯ್ಯ ಅರಳೆಲೆಮಠ ಅಭಿಪ್ರಾಯಪಟ್ಟರು.

ಪಟ್ಟಣದ ಕೋಡಿಕೊಪ್ಪದಲ್ಲಿನ ಶ್ರೀ ಅನ್ನದಾನೇಶ್ವರ ನಗರದಲ್ಲಿ ಸ್ವರ ಮಂದಾರ ಸಂಗೀತ ಪಾಠಶಾಲೆಯ ಆಶ್ರಯದಲ್ಲಿ ಆಚರಿಸಲಾದ ವಿಶ್ವ ಸಂಗೀತ ದಿನಾಚರಣೆಯಲ್ಲಿ ಅವರು ಮಾತನಾಡಿದರು. ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಮಾತನಾಡಿ, ಮನುಷ್ಯನ ದೇಹವು ಸಂಗೀತದ ತತ್ವಗಳಿಂದ ಮಾಡಲ್ಪಟ್ಟಿದೆ. ಸಂಗೀತದ ನಾದ ಎಲ್ಲಿಂದ ಕೇಳಿ ಬಂದರೂ ಮನುಷ್ಯ ಒಂದು ಕ್ಷಣ ನಿಂತು ಅದನ್ನು ಆಸ್ವಾದಿಸಿ ಮುಂದೆ ಹೋಗುತ್ತಾನೆ. ಇಂತಹ ಶಕ್ತಿಯಿರುವ ಸಂಗೀತವನ್ನು ಆಸ್ವಾದಿಸಿ, ಆನಂದಿಸುವ ಗುಣ ನಮ್ಮೆಲ್ಲರಲ್ಲಿ ಬರಬೇಕು ಎಂದರು.




ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿ, ಸಂಗೀತ ಮನುಷ್ಯನ ಜೀವನದ ಅವಿಭಾಜ್ಯ ಅಂಗವಾಗಿದೆ. ಸಂಗೀತ ಕಲಿಯಲು ಬಂದಿರುವ ಪ್ರತಿಯೊಬ್ಬರೂ ಸಹ ರಾಗದ ಸಂಕಣ್ಣನಂತೆ ಪ್ರಸಿದ್ಧರಾಗಬೇಕೆಂದು ಹೇಳಿದರು. ಸಮಾರಂಭದ ಸಾನ್ನಿಧ್ಯ ವಹಿಸಿದ್ದ ರಾಜಯೋಗಿನಿ ಬಿ.ಕೆ. ಸವಿತಕ್ಕನವರು ಮಾತನಾಡಿ, ಸಂಗೀತವನ್ನು ಈ ಜಗತ್ತಿಗೆ ನೀಡಿದವನು ಪರಮಶಿವ. ಈ ಸೃಷ್ಟಿಯ ನಿರ್ಮಾಣಕ್ಕೆ ಕಾರಣನಾದ ಶಿವ ಸಂಗೀತ ಪ್ರಿಯನಾಗಿದ್ದ.

ಶಿಕ್ಷಕಿ ಗೀತಾ ಭೋಪಳಾಪೂರ ತೆರೆದಿರುವ ಈ ಸಂಗೀತ ಪಾಠಶಾಲೆ ಉತ್ತಮ ವಿದ್ಯಾರ್ಥಿಗಳನ್ನು ತಯಾರು ಮಾಡುವುದರ ಮೂಲಕ ಈ ನಾಡಿನಲ್ಲಿ ಉತ್ತಮ ಹೆಸರನ್ನು ಗಳಿಸಲಿ ಎಂದು ಆಶೀರ್ವದಿಸಿದರು. ಸಭೆಯನ್ನುದ್ದೇಶಿಸಿ ಡಾ. ಆರ್. ಕೆ. ಗಚ್ಚಿನಮಠ ಮಾತನಾಡಿದರು. ವೇದಿಕೆಯ ಮೇಲೆ ನರೇಗಲ್ ನೆಲ-ಜಲ ಸಂರಕ್ಷಣಾ ಸಮಿತಿಯ ಅಧ್ಯಕ್ಷ ಜಗದೀಶ ಸಂಕನಗೌಡರ, ಆನಂದ ಕುಲಕರ್ಣಿ ಉಪಸ್ಥಿತರಿದ್ದರು. ನ್ಯಾಯವಾದಿ ನೀರಲೋಟಿ ದಂಪತಿಗಳು ಕಾರ್ಯಕ್ರಮ ನಿರೂಪಿಸಿದರು. ಗೀತಾ ಭೋಪಳಾಪೂರ ಸ್ವಾಗತಿಸಿದರು. ಜಯಶ್ರೀ ಜೋಷಿ ವಂದಿಸಿದರು.

# ಬಿ.ಎಸ್. ಮಾನೇದರಿಗೆ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಮಹೇಶ ಗದಗಿನ (ಕರಿಬಿಷ್ಠಿ) ಇವರ ಸ್ನೇಹಿತರ ಬಳಗದ ವತಿಯಿಂದ ರೋಣದ ಸರಕಾರಿ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಬೂದಪ್ಪ ಶರಣಪ್ಪ ಮಾನೇದ ಇವರ ಸೇವಾ ನಿವೃತ್ತಿ ನಿಮಿತ್ತ ಸನ್ಮಾನಿಸಲಾಯಿತು. ಇವರ ಸೇವೆಯನ್ನು ಮೆಚ್ಚಿ ಬೆಟಗೇರಿಯ ವಿವಿಧ ಓಣಿಯ ಗುರು-ಹಿರಿಯರು ಸೇರಿ ಬಿ. ಎಸ್. ಮಾನೇದ ದಂಪತಿಗಳಿಗೆ ಸನ್ಮಾನಿಸಿ ನೆನಪಿನ ಕಾಣಿಕೆಯನ್ನು ನೀಡಿ ಗೌರವಿಸಿದರು.

ಅಧ್ಯಕ್ಷತೆಯನ್ನು ವೀರ ರಾಣಿ ಕಿತ್ತೂರು ಚನ್ನಮ್ಮ ಸೇವಾ ಸಮಿತಿಯ ಅಧ್ಯಕ್ಷ ಮಹೇಶ ಕರಿಬಿಷ್ಠಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಜ್ಜನಗೌಡ್ರ ಹಿರೇಮನಿಪಾಟೀಲ, ಎಂ.ಎಸ್. ಮಲ್ಲಾಪೂರ, ಸಿ.ಎಂ. ಮಾರನಬಸರಿ ಪಾಲ್ಗೊಂಡಿದ್ದರು. ಸನ್ಮಾನಿತರ ಪರಿಚಯವನ್ನು ಸಿ.ಎಂ. ಮಾರನಬಸರಿ ನೆರವೇರಿಸಿದರು. ಕೆ.ಬಿ. ಹೆಳವಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರವಿ ಚಿಕ್ಕಣ್ಣವರ ಕಾರ್ಯಕ್ರಮ ನಿರೂಪಿಸಿದರು.

ಪ್ರಾರ್ಥನಾ ಗೀತೆಯನ್ನು ಶಿಲ್ಪಾ ಹೆಳವಿ ಹಾಡಿದರು. ನಿಂಗಪ್ಪ ಅಣ್ಣಿಗೇರಿವಂದಿಸಿದರು. ಕಾರ್ಯಕ್ರಮದಲ್ಲಿ ಈರಣ್ಣ ಮಾನೇದ, ಅಂದಪ್ಪ ಮುಳ್ಳಾಳ, ಈಶಪ್ಪ ಚಿಕ್ಕಣ್ಣವರ, ಶಿವಣ್ಣ ನಾಗರಾಳ, ಗುರುಲಿಂಗಪ್ಪ ಕರಿಬಿಷ್ಠಿ ಸಂತೋಷ ಖಾನಾಪೂರ, ಮುದಕಪ್ಪ ಹೊಳಿ ಮುಂತಾದವರು ಉಪಸ್ಥಿತರಿದ್ದರು.

## ನಿಧನ ವಾರ್ತೆ

### ಹನಮಂತಗೌಡ ದೇಸಾಯಿಗೌಡ್ರ



**ಗದಗ:** ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರು, ಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷರೂ ಆಗಿದ್ದ ಹನಮಂತಗೌಡ್ರ ಯಲ್ಲಪ್ಪಗೌಡ್ರ ದೇಸಾಯಿಗೌಡ್ರ(93) ಸೋಮವಾರ ನಿಧನ ಹೊಂದಿದರು.

ಮೃತರು ಜೆ.ಟಿ. ಕಾಲೇಜ್, ಮಾಡೆಲ್ ಹೈಸ್ಕೂಲ್ ಮತ್ತು ಅರ್ಬನ್ ಡೆವೆಲಪ್ಮೆಂಟ್ ಅಥಾರಿಟಿ, ದಿ.ಹುಲಕೋಟಿ ಕೋ ಆಪ್ ಆಯಿಲ್ & ಫೀಡ್ಸ್ ಸೊಸಾಯಿಟಿ ಚೇರ್ಮನ್ನರಾಗಿ, ಕೆ.ಎಲ್.ಇ ಸೊಸೈಟಿಯ ಆಜೀವ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದರು. ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದ ದೇಸಾಯಿಗೌಡ್ರ ಅಪಾರ ಬಂಧುಗಳು, ಅಭಿಮಾನಿಗಳು ಹಾಗೂ ಹಿತೈಷಿಗಳನ್ನು ಅಗಲಿದ್ದಾರೆ.

ಮೃತರ ಅಂತಿಮ ಯಾತ್ರೆ ಮಂಗಳವಾರ ಬೆಳಿಗ್ಗೆ 11ಗಂಟೆಗೆ ಸ್ವಗೃಹದಿಂದ ಹೊರಡುವುದು. ನಂತರ ವೀರಶೈವ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ಮೀನಾಕ್ಷಮ್ಮ ಬೇವಿನಮರದ



ಲಕ್ಷ್ಮೇಶ್ವರ: ಪಟ್ಟಣದ ಹಿರಿಯರಾದ ಮೀನಾಕ್ಷಮ್ಮ ಮಹಾಬಳೇಶ್ವರಪ್ಪ ಬೇವಿನಮರದ(76) ಇವರು ಸೋಮವಾರ ಸಂಜೆ ನಿಧನರಾದರು.

ಮೃತರಿಗೆ ಪತಿ, ಮೂವರು ಪುತ್ರರು, ಈರ್ವರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವಿದೆ.

# ಮಹಿಳೆಯರ ಸಮಾನ್ಯ ತೊಂದರೆ ಕುರಿತು ಮಾಹಿತಿ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಶಿರಹಟ್ಟಿ ಫಕೀರೇಶ್ವರ ಸ.ಪ್ರ.ದ ಪದವಿ ಮಹಾವಿದ್ಯಾಲಯದ ಎನ್.ಎಸ್.ಎಸ್ ಮತ್ತು ವಾಯ್. ಆರ್.ಸಿ ಘಟಕದ ವತಿಯಿಂದ ವಿದ್ಯಾರ್ಥಿಗಳಿಗಾಗಿ 'ಮಾಸಿಕ ಋತುಸ್ರಾವದಲ್ಲಿ ನೈರ್ಮಲ್ಯದ ಮಹತ್ವ' ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.





ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ಡಾ. ನಾಗರತ್ನಾ ಕೋಲೋಳಗಿ ಹಾಗೂ ರೊ. ಡಾ. ಕಮಲಾಕ್ಷಿ ಅಂಗಡಿ ಮಾತನಾಡಿ, ಮುಟ್ಟಿನ ನೈರ್ಮಲ್ಯವನ್ನು ನಿರ್ವಹಿಸುವಲ್ಲಿ ಹೆಣ್ಣುಮಕ್ಕಳು ಎದುರಿಸುತ್ತಿರುವ ತಾರತಮ್ಯ, ನಿಷೇಧಗಳು ಮತ್ತು ಸವಾಲುಗಳನ್ನು ತಿಳಿಸಿದರು. ವಿದ್ಯಾರ್ಥಿಗಳು ಸರಿಯಾದ ಸಮಯದಲ್ಲಿ ಉತ್ತಮ ಆಹಾರ-ಪದಾರ್ಥಗಳನ್ನು ಸೇವಿಸುವುದರ ಜೊತೆಗೆ ದೈಹಿಕ ವ್ಯಾಯಾಮಗಳನ್ನು ಪ್ರತಿದಿನ ತಪ್ಪದೇ ಮಾಡಬೇಕೆಂದು ತಿಳಿಸಿದರು. ವಿದ್ಯಾರ್ಥಿಗಳು ವೈದ್ಯರೊಂದಿಗೆ ತಮ್ಮಲ್ಲಿರುವ ಸಂದೇಹಕ್ಕೆ ತಕ್ಕ ಸಮಾಧಾನವನ್ನು ಪಡೆದುಕೊಂಡರು.

ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಉಮೇಶ ಅರಹುಣಶಿ ಸರ್ವರನ್ನು ಸ್ವಾಗತಿಸಿದರು. ಕಾರ್ಯಕ್ರದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ, ಕಾರ್ಯದರ್ಶಿಗಳಾದ ರೊ. ವೀಣಾ ತಿರ್ಲಾಪೂರ, ರೊ. ಶ್ರೀಧರ ಸುಲ್ತಾನಪೂರ, ರೊ. ಶಿವಾಚಾರ್ಯ ಹೊಸಳ್ಳಿಮಠ, ರೊ. ಬಾಲಕೃಷ್ಣ ಕಾಮತ, ಮಹಾವಿದ್ಯಾಲಯದ ಎನ್.ಎಸ್.ಎಸ್ ಮತ್ತು ವಾಯ್.ಆರ್.ಸಿ ಘಟಕದ ಸಂಯೋಜಕರಾದ ಬಸವರಾಜ ಕುರಗುಂದ ಮತ್ತು ಫಕೀರೇಶ ಜಾಲಿಹಾಳ, ಸ್ಕೌಟ್ಸ್ ಮತ್ತು ಗೈಡ್ಸ್‌ನ ಸಂಯೋಕ ಡಾ. ಶಂಕರಪ್ಪ ಬಾರಕೇರ ಮುಂತಾದವರು ಉಪಸ್ಥಿತರಿದ್ದರು.

## ವಿಧಾನ ಪರಿಷತ್ ಸಭಾಪತಿ ಹೊರಟ್ಟಿ ಅವರ ಜಿಲ್ಲಾ ಪ್ರವಾಸ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ



ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಜೂನ್ 26 ರಂದು ಹುಬಳ್ಳಿಯಿಂದ ಗದಗ ಜಿಲ್ಲೆಗೆ ಸಂಜೆ 6 ಗಂಟೆಗೆ ಆಗಮಿಸಿ ಪರಮ ಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರ ಗವಾಯಿಗಳವರ 80ನೇ ಹಾಗೂ ಪರಮ ಪೂಜ್ಯ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ರಾತ್ರಿ 8 ಗಂಟೆಗೆ ಗದಗದಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಜನೌಷಧಿ ಕೇಂದ್ರದ ಲಾಭ ಪಡೆಯಿರಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಡವರು, ಜನಸಾಮಾನ್ಯರಿಗೂ ಕಡಿಮೆ ಬೆಲೆಯಲ್ಲಿ ಔಷಧ ಲಭ್ಯವಾಗಬೇಕೆಂಬ ಉದ್ದೇಶದಿಂದ ಕೇಂದ್ರ ಸರ್ಕಾರ ದೇಶಾದ್ಯಂತ ಜನೌಷಧ ಕೇಂದ್ರಗಳನ್ನು ಪ್ರಾರಂಭಿಸಿದೆ. ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಧಾನಮಂತ್ರಿ ಭಾರತೀಯ ಜನೌಷಧ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ಜನೌಷಧ ಕೇಂದ್ರದಲ್ಲಿ ಹಾಗೂ ಇತರ ಔಷಧ ಅಂಗಡಿಗಳಲ್ಲಿ ದೊರೆಯುವ ಔಷಧಿಗಳು ಒಂದೇ ಆಗಿರುತ್ತವೆ. ಆದರೆ ಬೇರೆ ಬೇರೆ ಹೆಸರು ಹೊಂದಿರುತ್ತವೆ. ಖಾಸಗಿ ಔಷಧಂಗಡಿಯಲ್ಲಿ ನೂರಾರು ರೂ ಕೊಟ್ಟು ಖರೀದಿಸುವ ಔಷಧಿ ಇಲ್ಲಿ ಕಡಿಮೆ ಸಿಗುತ್ತದೆ. ಇದರಿಂದ ಅನೇಕ ಬಡವರು/ಜನಸಾಮಾನ್ಯರಿಗೆ ಸಾಕಷ್ಟು ಅನಕೂಲವಾಗುತ್ತದೆ. ಮುಖ್ಯವಾಗಿ ಮಧುಮೇಹಿಗಳು, ರಕ್ತದೊತ್ತಡ, ಹೃದಯರೋಗ, ಜ್ವರ, ನೆಗಡಿ, ಕೆಮ್ಮು, ಗರ್ಭಿಣಿಯರು ಸೇರಿ ಚಿಕ್ಕಮಕ್ಕಳಿಗೆ ಜನೌಷಧಿ ಕೇಂದ್ರದಲ್ಲಿ ಅತ್ಯಂತ ಕಡಿಮೆ ದರದಲ್ಲಿ ಔಷಧಿ ಸಿಗುತ್ತವೆ. ಆದ್ದರಿಂದ ಔಷಧ ಅಗತ್ಯ ಇರುವವರು ಈ ಕೇಂದ್ರದ ಲಾಭ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಆಡಳಿತ ವೈದ್ಯಾಧಿಕಾರಿ ಡಾ. ಶ್ರೀಕಾಂತ ಕಾಟೇವಾಲೆ, ಗಿರೀಶ ಅಗಡಿ, ವಿಜಯ ಮೆಕ್ಕಿ, ಸಿದ್ದು ಸವಣೂರ, ನವೀನ ಬೆಳ್ಳಟ್ಟಿ, ದುಂಡೇಶ ಕೊಟಗಿ, ಗಿರೀಶ ಚೌರಡ್ಡಿ, ರಂಗಣ್ಣ ಬದಿ, ಅಶೋಕ ಶಿರಹಟ್ಟಿ, ಅನೀಲ ಮುಳಗುಂದ, ವಿಜಯ ಬೂದಿಹಾಳ, ಐ.ಕೆ ಹೊನ್ನಪ್ಪನವರ, ದೇವಪ್ಪ ನಂದೆಣ್ಣವರ, ವಿಶಾಲ ಬಟಗುರ್ಕಿ ಸೇರಿ ಹಲವರಿದ್ದರು.

### ಪರಿಸರ ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಪಿಎಸ್‌ಐ ಈರಪ್ಪ ರಿತ್ತಿ ಕರೆ

## ಪರಿಸರ ಸಮತೋಲನಕ್ಕೆ ಕೊಡುಗೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಸರ ರಕ್ಷಣೆ ಬಗ್ಗೆ ಎಲ್ಲರೂ ಜಾಗೃತರಾಗಬೇಕು. ಒಬ್ಬೊಬ್ಬರು ಕನಿಷ್ಠ ಮೂರು ಸಸಿಗಳನ್ನು ನೆಟ್ಟು ಬೆಳೆಸಬೇಕು. ಅಂದಾಗ ಮಾತ್ರ ಪರಿಸರ ಸಮತೋಲನಕ್ಕೆ ಬರಲು ಸಾಧ್ಯ ಎಂದು ಪಿಎಸ್‌ಐ ಈರಪ್ಪ ರಿತ್ತಿ ಕರೆ ನೀಡಿದರು.

ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತು, ವಿಶ್ವ ಕಂಪ್ಯೂಟರ್ ಅಕಾಡೆಮಿ ಮತ್ತ ತಾಲ್ಲೂಕು ಕದಳಿ ಮಹಿಳಾ ವೇದಿಕೆಗಳ ಆಶ್ರಯದಲ್ಲಿ ಜರುಗಿದ ಪರಿಸರ ಕವಿಗೋಷ್ಠಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ ಮಾತನಾಡಿ, ಭೂಮಿ, ವಾಯು, ಜಲ ಮೂಲಗಳು ಪರಿಸರದ ಅಂಗಗಳು. ಈಚಿನ ದಿನಗಳಲ್ಲಿ ಅವುಗಳನ್ನು ಎಗ್ಗಿಲ್ಲದೆ ಬಳಸುವ ಮೂಲಕ ಪರಿಸರಕ್ಕೆ ಧಕ್ಕೆ ತಂದಿದ್ದೇವೆ. ಇದರ ಪರಿಣಾಮ ವಾತಾವರಣದಲ್ಲಿ ಏರುಪೇರುಗಳಾಗುತ್ತಿದೆ. ಆದ್ದರಿಂದ ಪರಿಸರ ಸಂರಕ್ಷಣೆ ನಮ್ಮ ಬದುಕಿನ ಅಂಗವಾಗಬೇಕು ಎಂದರು.

ಕದಳಿ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ, ಹಿರಿಯ ಕವಿ ಕೊತ್ತಲ ಮಹಾದೇವಪ್ಪ ಮಾತನಾಡಿದರು. ಶ್ರೀನಿಧಿ ಸಿಳ್ಳಿನ, ಶ್ರೇಯಾ ಕಳಸಾಪುರ, ಯತ್ನಳ್ಳಿ, ಸಿ.ಜಿ. ಹಿರೇಮಠ, ಪೂರ್ಣಾಜಿ ಖರಾಟೆ, ರತ್ನಾ ಕರ್ಕಿ, ಮಹಾನಂದ ಕೊಣ್ಣೂರ, ಚಂದ್ರಶೇಖರ ವಡಕಣ್ಣವರ, ಬಿ.ಎಸ್. ಹೆಬ್ಬಾಳ, ಜಯಶ್ರೀ ಬಾಳಿಹಳ್ಳಿಮಠ, ಮೈತ್ರಾದೇವಿ ಹಿರೇಮಠ, ನಿರ್ಮಲಾ ಅರಳಿ, ಪ್ರತಿಭಾ ಸಿಳ್ಳಿನ, ವಿಜಯಲಕ್ಷ್ಮೀ ಕರ್ಕಿ, ಸೋಮಣ್ಣ ಯತ್ನಳ್ಳಿ ಪರಿಸರದ ಬಗ್ಗೆ ಕವನ ವಾಚಿಸಿದರು. ಜೆ.ಎಸ್. ರಾಮಶೆಟ್ರ ಸ್ವಾಗತಿಸಿದರು. ಬಸವರಾಜ ಸಂಗಪ್ಪಶೆಟ್ರ ನಿರೂಪಿಸಿದರು.


ಈ ಸಂದರ್ಭದಲ್ಲಿ ಎಮ್.ಕೆ. ಕಳ್ಳಿಮಠ, ಎಸ್.ಬಿ. ಕೊಣ್ಣೂರ, ವೆಂಕಟೇಶ ಮಾತಾಡೆ, ತಹಸೀಲ್ದಾರ, ಬಿಂಕದಕಟ್ಟಿ, ಡಾ.ಹೂವಿನ, ಸುಲೋಚನಾ ಜವಾಯಿ, ಗಂಗಾಧರ ಅರಳಿ, ಗೊರವರ ಸೇರಿದಂತೆ ಮತ್ತಿತರರು ಇದ್ದರು.

ಅಧ್ಯಕ್ಷತೆ ವಹಿಸಿದ್ದ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ, ಪರಿಸರ ನಾಶದಿಂದ ವಾತಾವರಣ ವರ್ಷದಿಂದ ವರ್ಷಕ್ಕೆ ಬಿಸಿಯಾಗುತ್ತಲೇ ಇದೆ. ಸಾವಿರಾರು ಜನರು ಸಾವಿಗೀಡಾಗಿದ್ದು, ಇದಕ್ಕೆಲ್ಲ ಪರಿಸರ ನಾಶವೇ ನೇರ ಕಾರಣವಾಗಿದೆ. ಈಗಲೂ ನಾವು ಎಚ್ಚೆತ್ತುಕೊಂಡು ಪರಿಸರ ರಕ್ಷಣೆ ಮಾಡದಿದ್ದರೆ ಮತ್ತಷ್ಟು ಕೆಟ್ಟ ಪರಿಸ್ಥಿತಿ ಬಂದೊಗಲಿದೆ ಎಂದರು.

### ಡಾ. ಮುಖರ್ಜಿ ಅವರ ತತ್ವಾದರ್ಶ ಅರಿಯಲು ಕಾರ್ಯಕರ್ತರಿಗೆ ರಾಜು ಕುರಡಗಿ ಕರೆ

# ಡಾ. ಮುಖರ್ಜಿಯವರ ಬಲಿದಾನ ದಿನ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ




ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಹಾಗೂ ಗದಗ ನಗರ ಮಂಡಲ ವತಿಯಿಂದ ಪಕ್ಷದ ಸಂಸ್ಥಾಪಕರು, ಹಿರಿಯರಾದ ಡಾ. ಶ್ಯಾಮಪ್ರಸಾದ್ ಮುಖರ್ಜಿಯವರ ಬಲಿದಾನ ದಿನವನ್ನು ಆಚರಿಸಲಾಯಿತು.

ಪಕ್ಷದ ಹಿರಿಯರಾದ ಜಗನ್ನಾಥಸಾ ಭಾಂಡಗೆ ಮಾತನಾಡಿ, ಮುಖರ್ಜಿಯವರು ಹಾಕಿಕೊಟ್ಟ ಮಾರ್ಗದಲ್ಲಿ ಎಲ್ಲ ಕಾರ್ಯಕರ್ತರು ಪಕ್ಷವನ್ನ ಸಂಘಟಿಸುವತ್ತ ಗಮನಹರಿಸಬೇಕೆಂದು ಹೇಳಿದರು.

ಎಂ.ಎಸ್. ಕರಿಗೌಡ್ರ ಮಾತನಾಡಿ, ಅಂದಿನ ಪಕ್ಷ ಬಲವರ್ಧನೆಯ ಕಾರ್ಯ ಹಾಗೂ ಇಂದಿನ ಬಿಜೆಪಿಯ ಬಲವರ್ಧನೆಯ ಕಾರ್ಯಕ್ಕೆ ಬಹಳಷ್ಟು ಕಾರ್ಯದ ಚಟುವಟಿಕೆಗಳು ವಿಭಿನ್ನವಾಗಿದ್ದು, ಅಂದು 2 ಲೋಕಸಭಾ ಸದಸ್ಯರಿದ್ದ ಪಕ್ಷವನ್ನು ಇಂದು 303ರ ಸ್ಥಾನಕ್ಕೆ ತಂದು ಪಕ್ಷವನ್ನ ಅಧಿಕಾರಕ್ಕೆ ಬರುವ ಹಾಗೆ ಮಾಡಿರುವ ಮುಖರ್ಜಿಯವರ ಬಲಿದಾನವನ್ನು ನಾವು ನೆನೆಯಬೇಕಿದೆ ಎಂದರು.

ಗದಗ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಪಕ್ಷದ ಸಂಘಟನೆಯನ್ನು ಮುಖರ್ಜಿಯವರ ಮಾರ್ಗದರ್ಶನ, ಅವರ ತತ್ವಾದರ್ಶ ಮತ್ತು ಪಕ್ಷ ಬೆಳೆದುಬಂದ ಹಾದಿಯನ್ನು ಎಲ್ಲ ಬಿಜೆಪಿಯ ಕಾರ್ಯಕರ್ತರು ಅರಿಯಬೇಕು. ನಮ್ಮ ಹಿರಿಯರು ಯಾವುದೇ ಆಶೆ, ಆಕಾಂಕ್ಷೆಗಳಿಲ್ಲದೆ ಪಕ್ಷವನ್ನು ಬೆಳೆಸಿದ್ದಾರೆ. ಪಕ್ಷದ ಮುಂದಿನ ಬೆಳವಣಿಗೆ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿರುವುದರಿಂದ ಜಿಲ್ಲಾ ಬಿಜೆಪಿಯ ಎಲ್ಲ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ನೆರವೇರಿಸಲು ಕರೆ ನೀಡಿದರು.

ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿದರು. ಈ ಸಂದರ್ಭದಲ್ಲಿ ಗಂಗಾಧರ ಹಬೀಬ, ಶಶಿಧರ ದಿಂಡೂರ, ಸುರೇಶ ಚಿತ್ತರಗಿ, ನಿರ್ಮಲಾ ಕೊಳ್ಳಿ, ಸಂತೋಷ ಅಕ್ಕಿ, ಶಂಕರ ಕರಿಬಿಷ್ಠಿ, ಮಂಜುನಾಥ ತಳವಾರ, ವಂದನಾ ವರ್ಣೇಕರ, ಅಯ್ಯಪ್ಪ ಅಂಗಡಿ, ರತ್ನಾ ಕುರಗೊಡ, ಪದ್ಮನಿ ಮುತ್ತಲದಿನ್ನಿ, ಕಿಶನ ಮೇರವಾಡೆ, ನಿಸಾರ ನಮಾಜಿ ಮುಂತಾದವರು ಉಪಸ್ಥಿತರಿದ್ದರು.

## ಗದುಗಿನ ಇತಿಹಾಸ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕದ ಸಾಂಸ್ಕೃತಿಕ ಇತಿಹಾಸದ ಅಧ್ಯಯನದಲ್ಲಿ ಗದುಗಿನ ಇತಿಹಾಸ ಮತ್ತು ಸ್ಮಾರಕಗಳು ಸರ್ವಕಾಲಕ್ಕೂ ಸ್ಮರಣೀಯವಾಗಿವೆ. ಜಿಲ್ಲೆಯ ಇತಿಹಾಸ ಮತ್ತು ಸಂಸ್ಕೃತಿಯ ಸಂವರ್ಧನೆಯಲ್ಲಿ ಭೌಗೋಳಿಕ ಸಂಪನ್ಮೂಲಗಳ ಪಾತ್ರ ಅನನ್ಯವಾದದ್ದು ಎಂದು ಇತಿಹಾಸ ಸಂಶೋಧಕ ಮತ್ತು ಪ್ರವಾಸಿ ಮಾರ್ಗದರ್ಶಿ ಅ.ದ. ಕಟ್ಟಿಮನಿ ಹೇಳಿದರು.

ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ವಿಭಾಗದ 2ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಶನಿವಾರ ಡಾ. ಅಪ್ಪಣ್ಣ ಹಂಜೆ ಅವರ ಮಾರ್ಗದರ್ಶನದಲ್ಲಿ 'ಗದಗ ನಗರದ ಇತಿಹಾಸ ಮತ್ತು ಸ್ಮಾರಕಗಳು' ಕುರಿತು ಕ್ಷೇತ್ರಕಾರ್ಯ ಅಧ್ಯಯನ ಕೈಗೊಂಡರು.

ಗದಗ ನಗರದ ಇತಿಹಾಸ ಮತ್ತು ಸ್ಮಾರಕಗಳನ್ನು ಪರಿಚಯಿಸುತ್ತ ಸ್ಥಳೀಯ ತ್ರಿಕೂಟೇಶ್ವರ, ಸರಸ್ವತಿ, ವೀರನಾರಾಯಣ, ಕರಿದೇವರ ಗುಡಿ, ರಾಮಲಿಂಗೇಶ್ವರ ದೇವಾಲಯಗಳು ಹಾಗೂ ಜುಮ್ಮಾ ಮಸೀದಿಯ ನಿರ್ಮಾತೃರು, ಕಾಲಮಾನ, ವಾಸ್ತುಕಲೆ ವೈಶಿಷ್ಟ್ಯಗಳು, ಇವುಗಳ ಪೂಜೆ-ಪುನಸ್ಕಾರ, ಜೀರ್ಣೋದ್ಧಾರ ಇತ್ಯಾದಿ ಚಟುವಟಿಕೆಗಳಿಗೆ ಪ್ರಭುಗಳು ಮತ್ತು ಪ್ರಜೆಗಳು ಕೊಡಮಾಡಿದ ದಾನ-ದತ್ತಿಗಳನ್ನು ದಾಖಲಿಸಿರುವ ಶಾಸನಗಳನ್ನು ಸವಿಸ್ತಾರವಾಗಿ ವಿವರಿಸಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಅಪ್ಪಣ್ಣ ಹಂಜೆ ವಿದ್ಯಾರ್ಥಿಗಳಿಗೆ ಗದುಗಿನ ಸ್ಮಾರಕಗಳು ಮತ್ತು ಶಿಲ್ಪಗಳ ಪರಿಕಲ್ಪನೆಗಳು, ವಾಸ್ತು ಲಕ್ಷಣಗಳು, ಪ್ರತಿಮಾ ಲಕ್ಷಣಗಳನ್ನು ವಿವರಿಸಿ, ಕರ್ನಾಟಕದ ವಾಸ್ತುಶಿಲ್ಪ ಕಲೆಗಳ ಅಧ್ಯಯನದಲ್ಲಿ ಇವುಗಳ ಪಾತ್ರ ಅನನ್ಯವಾಗಿದ್ದು, ತ್ರಿಕೂಟೇಶ್ವರ, ವೀರನಾರಾಯಣ, ಜುಮ್ಮಾ ಮಸೀದಿಗಳ ಆಡಳಿತ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ನಿರ್ವಹಣೆಯನ್ನು ಒಂದೇ ಕಮಿಟಿ ನಿರ್ವಹಿಸುತ್ತಿದ್ದ ಸಂಗತಿ ಜಿಲ್ಲೆಯ ಸಾಮರಸ್ಯ, ಸಹಬಾಳ್ವೆ, ಸಮನ್ವಯತೆ, ಸೌಹಾರ್ದತೆ, ಸಮಾನತೆ, ಸಹಿಷ್ಣುತೆ ಜೀವನ ಮೌಲ್ಯಗಳಿಗೆ ಅತ್ಯುತ್ತಮ ನಿದರ್ಶನವಾಗಿದೆ ಎಂದು ಹೇಳಿದರು.

ಇತಿಹಾಸ ಉಪನ್ಯಾಸಕ ಪ್ರೊ. ಬಸವಂತೆಪ್ಪ ದೊಡ್ಡಮನಿ ವಿದ್ಯಾರ್ಥಿಗಳಿಗೆ ಗದುಗಿನ ಸ್ಮಾರಕಗಲ್ಲುಗಳು, ಬಾವಿಗಳು, ಮಠಗಳು, ಕೆರೆಗಳ ಹಿರಿಮೆಯನ್ನು ಪರಿಚಯಿಸಿದರು.

## ಗುಣಮಟ್ಟದ ಆಹಾರ ಪೂರೈಕೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ಸೇರಿದಂತೆ ರಾಜ್ಯದಲ್ಲಿ ಚಿಕ್ಕಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ, ತಾಯಂದಿರಿಗೆ ಆಹಾರವನ್ನು ವಿತ್ತರಿಸುತ್ತಿದ್ದು, ಕೆಲ ಅಂಗನವಾಡಿ ಕೇಂದ್ರಗಳಲ್ಲಿ ಕಡಿಮೆ ಗುಣಮಟ್ಟದ ಆಹಾರ ಪೂರೈಕೆಯಾಗುತ್ತಿರುವ ಕುರಿತು ದೂರುಗಳು ಕೇಳಿ ಬರುತ್ತಿವೆ. ಮುಖ್ಯಮಂತ್ರಿಗಳು ಈ ಕುರಿತಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ತಾಲೂಕು ಘಟಕ ಸೋಮವಾರ ತಹಸೀಲ್ದಾರರ ಮೂಲಕ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾ ಅಧ್ಯಕ್ಷ ರವಿ ಲಿಂಗಶೆಟ್ಟಿ, ರಾಜ್ಯದ ಕೆಲವು ಕಡೆಗಳಲ್ಲಿ ಕಡಿಮೆ ಗುಣಮಟ್ಟದ ಆಹಾರ ಪೂರೈಕೆ ಮಾಡುತ್ತಿರುವದು ಕಂಡು ಬಂದಿದೆ. ಉತ್ತಮ ಪೋಷಕಾಂಶಗಳನ್ನು ಹೊಂದಿರುವ ಆಹಾರ ನೀಡುವ ಸರಕಾರದ ಉದ್ದೇಶ ಇಲ್ಲಿ ಸರಿಯಾಗಿ ಈಡೇರಿಲ್ಲ. ಅಧಿಕಾರಿಗಳು ಒಳ್ಳೆಯ ಗುಣಮಟ್ಟದ ಆಹಾರ ಪೂರೈಕೆಯ ಬಗ್ಗೆ ಕಾಳಜಿವಹಿಸಿ ಮಕ್ಕಳಿಗೆ ಮತ್ತು ತಾಯಂದಿರಿಗೆ ಪೌಷ್ಟಿಕಾಂಶ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಮುಖ್ಯಮಂತ್ರಿಗಳು ಈ ಕುರಿತಂತೆ ವಿಶೇಷ ಗಮನ ಹರಿಸಿ ಉತ್ತಮ ಆಹಾರ ಪೂರೈಸಲು ಕ್ರಮ ವಹಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಶೋಕರಾಜ್ ಶಿರಹಟ್ಟಿ, ಸಾವಿತ್ರಿ ಕುರಿ, ಪುಷ್ಪಾ ಅಣ್ಣಿಗೇರಿ, ಬೀರಪ್ಪ ಪೂಜಾರ, ಶಿವಣ್ಣ ಗಿಡಿಬಿಡಿ, ಎಂ.ಎಂ. ಕಂಡೋಜಿ, ಮಂಜುನಾಥ್ ಚಂದರಗಿ, ಬಸವರಾಜ್ ಗಿಡಿಬಿಡಿ, ಮಂಜುನಾಥ್ ಮಲ್ಲೂರ, ರಾಜು ಹಾದಿಮನಿ, ಕಾರ್ಯಕರ್ತರು ಇದ್ದರು. ತಹಸೀಲ್ದಾರ ವಾಸುದೇವಸ್ವಾಮಿ ಮನವಿ ಸ್ವೀಕರಿಸಿದರು.



## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಗದಗ ಜಿಲ್ಲಾ ವ್ಯಾಪ್ತಿಯ ಮುಂಡರಗಿ ತಾಲೂಕಿನಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ಪ್ರವೇಶಕ್ಕೆ ಮುಸ್ಲಿಂ, ಕ್ರಿಶ್ಚಿಯನ್, ಜೈನ್ , ಬೌದ್ಧ , ಸಿಖ್ ಹಾಗೂ ಪಾರ್ಸಿ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸದರಿ ವಸತಿ ನಿಲಯಕ್ಕೆ ವಿದ್ಯಾರ್ಥಿಗಳು ಅರ್ಜಿಗಳನ್ನು www.shp.karnataka.gov.in ಮೂಲಕ ಅರ್ಜಿಗಳನ್ನು ಜುಲೈ 19 ರೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಯಾ ತಾಲೂಕಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ಸಂಪರ್ಕಿಸಬಹುದಾಗಿದೆ.

## ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಜುಲೈ 2 ರಂದು ಆಚರಿಸಲಾಗುವ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ನಿಮಿತ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಅಂಗವಾಗಿ ಜೂನ್ 25 ರಂದು ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿದ್ದಲಿಂಗನಗರ ಪ್ರೌಢಶಾಲೆಯಲ್ಲಿ ಶುದ್ಧ ಕುಡಿಯುವ ನೀರು ಘಟಕದ ಭೂಮಿಪೂಜೆ

# ಹೊರಟ್ಟಿಯವರ ಸೇವೆ ಸದಾ ಸ್ಮರಣೀಯ

■ ವಿಜಯಸಾಕ್ಷಿ ಸುದ್ದಿ, ಗದಗ



ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯನ್ನು ದತ್ತು ಪಡೆದು ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಶಾಲೆಯ ಕಳೆಯನ್ನು ಹೆಚ್ಚಿಸಿದ್ದಾರೆ. ಈಗ ವಿದ್ಯಾರ್ಥಿಗಳಿಗೆ ಶುದ್ಧ ನೀರಿನ ಕೊರತೆಯನ್ನು ನಿವಾರಿಸಲು ಮುಂದಾಗಿದ್ದು ಶ್ಲಾಘನೀಯ ಹಾಗೂ ಅವರ ಸೇವೆ ಸದಾಕಾಲ ಸ್ಮರಣೀಯ ಎಂದು ಗದಗ ಬೆಟಗೇರಿ ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ ಅಭಿಪ್ರಾಯಪಟ್ಟರು.

ಅವರು ಸ್ಥಳೀಯ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿಯವರ ಸಹಕಾರದಿಂದ ನಿರ್ಮಾಣಗೊಳ್ಳುತ್ತಿರುವ ಶುದ್ಧ ನೀರು ಘಟಕದ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಈ ಶಾಲೆಯಲ್ಲಿ ಓದುತ್ತಿರುವವರಲ್ಲಿ ಮಧ್ಯಮ ವರ್ಗ, ಬಡ ಹಾಗೂ ಗ್ರಾಮೀಣ ವಿದ್ಯಾರ್ಥಿಗಳೇ ಹೆಚ್ಚಿದ್ದಾರೆ. ಆ ಮಕ್ಕಳು ಸಹ ಶುದ್ಧ ಕುಡಿಯುವ ನೀರಿನಿಂದ ವಂಚಿತರಾಗಬಾರದು ಹಾಗೂ ಸಹಜ ನೀರನ್ನು ಕುಡಿದು ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಬಾರದು ಎಂಬ ಸದಾಶಯದೊಂದಿಗೆ ಹೊರಟ್ಟಿಯವರು ಶುದ್ಧ ನೀರು ಘಟಕದ ನಿರ್ಮಾಣಕ್ಕೆ ನೆರವು ನೀಡಿದ್ದಾರೆ ಎಂದರು.

ಡಾ.ಬಸವರಾಜ ಧಾರವಾಡ ಮಾತನಾಡಿ, ಶುದ್ಧ ನೀರಿನ ಕೊರತೆ ಈ ಶಾಲೆಯಲ್ಲಿ ಇದ್ದದ್ದನ್ನು ಮನಗಂಡು ಹೊರಟ್ಟಿಯವರು ಶುದ್ಧ ನೀರು ಘಟಕ ನಿರ್ಮಾಣಕ್ಕೆ ಅವಕಾಶ ಕಲ್ಪಿಸಿದ್ದಾರೆ. ಯುನಿಸೆಫ್ ವರದಿಯ ಪ್ರಕಾರ ದೇಶದ ಶೇ. 56 ಪ್ರತಿಶತ ಶಾಲೆಗಳಲ್ಲಿ ನೀರಿಲ್ಲ. ಉತ್ತಮ ಆರೋಗ್ಯಕ್ಕೆ ಶುದ್ಧ ನೀರಿನ ಅವಶ್ಯಕತೆ ಇದೆ. ಇದನ್ನು ಅರಿತ ಸಭಾಪತಿ ಬಸವರಾಜ ಹೊರಟ್ಟಿಯವರು ಇಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ನಿತ್ಯ ಶುದ್ಧ ನೀರು ದೊರೆಯುವಂತೆ ಕಲ್ಪಿಸಿಕೊಡಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಾ.ಶಿ. ಇಲಾಖೆ ಉಪನಿರ್ದೇಶಕ ಎಂ.ಎ. ರಡ್ಡೇರ್, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಂಕ್ರಮ್ಮ ಆರ್. ಹಣಮಗೌಡ್ರು, ಸಂಜೀವಿನಿ ಜಿ.ಕೂಲಗುಡಿ, ಎಂ.ಐ. ಶಿವನಗೌಡರ, ಮಂಜುಳಾ ಪಿ.ಸಾಮ್ರಾಣಿ, ಶಶಿಕಲಾ ಬಿ.ಗುಳೇದವರ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್.ಗಾಳಿ, ಶಾರದಾ ಎ.ಬಾಣದ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು. ಕುಷ್ಟಗಿ, ಗಂಗಾ ಎಂ.ಅಳವಂಡಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka